ಇನ್ನಷ್ಟು ಸ್ಥಳೀಯ ಸುದ್ದಿಗಳು ಪುಟ 13ರಲ್ಲಿ

ಕನ್ನಡಪ್ರಭ
ಶನಿವಾರ 9.05.2026

ಗರಿಷ್ಠ 34°c | ಕನಿಷ್ಠ 23°c

ಸುದ್ದಿ ಸಿಂಚನ

ದೇಗುಲ ನಿರ್ಮಾಣಕ್ಕೆ ಕೈಜೋಡಿಸಿದ ಭಕ್ತರಿಗೆ ಒಳಿತಾಗಲಿ: ಚಂದ್ರಶೇಖರ್

ಮಳವಳ್ಳಿ: ದೇವಸ್ಥಾನ ನಿರ್ಮಾಣದ ಸಂಕಲ್ಪ ಹೊತ್ತ ಸಂದರ್ಭದಲ್ಲಿ ಫಲಾಪೇಕ್ಷೆಯಿಲ್ಲದೇ ತನು, ಮನ, ಧನ ಅರ್ಪಿಸಿದ ಭಕ್ತರಿಗೆ ಭಗವಂತನು ಮತ್ತಷ್ಟು ಶಕ್ತಿಯನ್ನು ಕೊಟ್ಟು ಉದ್ಧರಿಸಲಿ ಎಂದು ಟ್ರಸ್ಟ್ ಅಧ್ಯಕ್ಷ ಕೀಲಾರ ಚಂದ್ರಶೇಖರ್ಆಶಿಸಿದರು.ಪಟ್ಟಣದ ಪೇಟೆ ಬೀದಿಯ ದೊಂಬಕಾಳೇಶ್ವರ ಟ್ರಸ್ಟ್ ಆವರಣದಲ್ಲಿ ಚಾಮರಾಜನಗರ ಜಿಲ್ಲೆಯ ಹೊಂಗನೂರು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀಕ್ಷೇತ್ರ ದೊಂಬಕಾಳೇಶ್ವರಸ್ವಾಮಿ, ಗೂಳೇಶ್ವರ ಮತ್ತು ವೀರಮಾಸ್ತಿ ಕೆಂಪಮ್ಮ ನೂತನ ದೇವಸ್ಥಾನ ನಿರ್ಮಾಣಕ್ಕೆ ಸಹಾಯ ನೀಡಿದ ದಾನಿಗಳಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು. ಪುರಸಭೆ ಮಾಜಿ ಸದಸ್ಯ ರಮೇಶ್ , ಮಳವಳ್ಳಿ ಶಾಖಾ ಅಧ್ಯಕ್ಷ ಸುಬ್ಬಣ್ಣ, ಖಜಾಂಚಿ ಶಿವಲಿ ಂಗಯ್ಯ, ಕಾಮಗೆರೆರವಿ, ಕೆಂಪೇಗೌಡ, ಪುಟ್ಟರಾಜು, ಕೆ.ಸಿ ನಾಗೇಗೌಡ, ಮುತ್ತುರಾಜು, ಚಿಕ್ಕಣ್ಣ ಇದ್ದರು.

ಮಗುವಿನ ಚಿಕಿತ್ಸಾ ವೆಚ್ಚಕ್ಕೆ ಮಂಡ್ಯ ರಕ್ಷಣಾ ವೇದಿಕೆ ವತಿಯಿಂದ ಹಣ ಸಂಗ್ರಹಣೆ

ಶ್ರೀರಂಗಪಟ್ಟಣ: ಲಿವರ್‌ಸಮಸ್ಯೆಯಿಂದ ಬಳಲುತ್ತಿದ್ದ ಪಟ್ಟಣದ ಕಸಾಬರ ಮಾರಿಗುಡಿ ಬೀದಿ ನಿವಾಸಿ ಮನೋಜ್- ಸಹನಾ ದಂಪತಿಯ ಒಂದು ವರ್ಷದ ಪುತ್ರ ಅನ್ವಿಕ್ ಚಿಕಿತ್ಸಾ ವೆಚ್ಚಕ್ಕಾಗಿ ಮಂಡ್ಯ ರಕ್ಷಣಾ ವೇದಿಕೆ ಕಾರ್ಯಕರ್ತರು ಪಟ್ಟಣದಲ್ಲಿ ಸಾರ್ವಜನಿಕರಿಂದ ಹಣ ಸಂಗ್ರಹಿಸಿ ಪೋಷಕರಿಗೆ ಹಸ್ತಾಂತರಿಸಿದರು. ವೇದಿಕೆ ಅಧ್ಯಕ್ಷ ಶಂಕರ್‌ಬಾಬು ಮಾತನಾಡಿ, ಅಪರೂಪದ ಕಾಯಿಲೆಯಿಂದ ಬಳಲುತ್ತಿರುವ ಒಂದು ವರ್ಷದ ಅನ್ವಿಕ್ ಚಿಕಿತ್ಸೆಗೆ ಸುಮಾರು ₹25 ಲಕ್ಷ ಹಣದ ಅವಶ್ಯಕತೆ ಇರುವುದಾಗಿ ವೈದ್ಯರು ತಿಳಿಸಿದ್ದಾರೆ. ಪೋಷಕರು ವೇದಿಕೆ ನೆರವು ಕೋರಿದ್ದರಿಂದ ಅವರಿಗೆ, ಸಹಾಯ ಹಸ್ತ ಚಾಚುವ ಜೊತೆಗೆ ಮಗು ಹಾಗೂ ಅವರ ಪೋಷಕರ ಜೊತೆಗೂಡಿ ಪಟ್ಟಣದ ಮುಖ್ಯ ಬೀದಿಗಳಲ್ಲಿ ಸಾರ್ವಜನಿಕರಿಂದ ಹಣ ಸಂಗ್ರಹಿಸಿ ಮಗುವಿನ ಆರೋಗ್ಯ ಸುಧಾರಣೆ ದೃಷ್ಟಿಯಿಂದ ಸಹಕಾರ ನೀಡುತ್ತಿದ್ದೇವೆ ಎಂದರು.ನಂತರ ರೈತ ಶಾಲೆ ಸಂಸ್ಥಾಪಕ ಗಂಜಾಂ ಸತ್ಯಮೂರ್ತಿ ಹಣ ಸಂಗ್ರಹಣಾ ಹುಂಡಿಗೆ ಹಣ ಹಾಕುವ ಮೂಲಕ ಚಾಲನೆ ನೀಡಿ, ಮಗುವಿನ ಚಿಕಿತ್ಸಾ ವೆಚ್ಚಕ್ಕಾಗಿ ಸಾರ್ವಜನಿಕರು, ವಿವಿಧ ಸಂಘಟನೆಗಳು, ಜನಪ್ರತಿನಿಧಿಗಳು, ರಾಜಕಾರಣಗಳು, ಸರ್ಕಾರಿ ನೌಕರರು ಹಾಗೂ ಸಂಘ, ಸಂಸ್ಥೆಗಳು ಉದಾರವಾಗಿ ನೆರವು ನೀಡಿ ಮಾನವೀಯತೆ ಮೆರೆಯುವಂತೆ ಅವರು ಮನವಿ ಮಾಡಿದರು.

ಯರಗನಹಳ್ಳೀಲಿ ಬೈಕ್‌ಗೆ ಕಾರು ಡಿಕ್ಕಿ: ಸವಾರ ಸಾವು

ಮದ್ದೂರು: ಕಾರು ಬೈಕ್‌ಗೆ ಡಿಕ್ಕಿಯಾಗಿ ಸವಾರ ಮೃತಪಟ್ಟಿರುವ ಘಟನೆ ತಾಲೂಕಿನ ಆತಗೂರು ಹೋಬಳಿ ಯರಗನಹಳ್ಳಿಯಲ್ಲಿ ಗುರುವಾರ ರಾತ್ರಿ ಜರುಗಿದೆ. ತಾಲೂಕಿನ ಮಾಚಹಳ್ಳಿಯ ಸುನೀಲ್ ಕುಮಾರ್‌ಅಲಿಯಾಸ್ ಕುಮಾರ (45) ಮೃತಪಟ್ಟ ಬೈಕ್ ಸವಾರ. ಅಪಘಾತದಲ್ಲಿ ತಲೆ ಮತ್ತು ದೇಹದ ಭಾಗಗಳಿಗೆ ತೀವ್ರವಾಗಿ ಬಿದ್ದ ಪೆಟ್ಟಿನಿಂದ ಗಾಯಗೊಂಡಿದ್ದ ಈತನನ್ನು ಮದ್ದೂರು ಆಸ್ಪತ್ರೆಗೆ ಕರೆತಂದು ಪ್ರಥಮ ಚಿಕಿತ್ಸೆ ನೀಡಿದ ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿಗೆ ಕರೆದೊಯ್ಯುವಾಗ ಮಾರ್ಗ ಮಧ್ಯೆ ಕೊನೆ ಉಸಿರೆಳೆದಿದ್ದಾನೆ. ಪೆಟ್ರೋಲ್ ಬಂಕ್ ನಲ್ಲಿ ಕೆಲಸ ಮಾಡುತ್ತಿದ್ದ ಸುನೀಲ್ ಕುಮಾರ್‌ರಾತ್ರಿ 10:45ರ ಸುಮಾರಿಗೆ ಬಂಕ್ ಕೆಲಸ ಮುಗಿಸಿ ಸ್ವಗ್ರಾಮ ಮಾಚಹಳ್ಳಿಗೆ ಹೋಗುತ್ತಿದ್ದಾಗ ಯರಗನಹಳ್ಳಿಯ ತುಮಕೂರು ಮದ್ದೂರು ರಾಜ್ಯ ಹೆದ್ದಾರಿಯಲ್ಲಿ ವೇಗವಾಗಿ ಬರುತ್ತಿದ್ದ ಕಾರು ರಸ್ತೆ ಡುಬ್ಬ ಹಾರಿ ಎದುರಿನಿಂದ ಬರುತ್ತಿದ್ದ ಸುನೀಲ್ ಬೈಕ್ ಗೆ ಮುಖಾಮುಖಿ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿದೆ. ಈ ಸಂಬಂಧ ಕೆಸ್ತೂರು ಪೊಲೀಸರು ಕಾರನ್ನು ವಶಕ್ಕೆ ಪಡೆದುಕೊಂಡು ಪ್ರಕರಣ ದಾಖಲಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.



ಮಳವಳ್ಳಿ ಪೇಟೆಬೀದಿಯ ದೊಂಬಕಾಳೇಶ್ವರ ಟ್ರಸ್ಟ್ ಆವರಣದಲ್ಲಿ ಚಾಮರಾಜನಗರ ಜಿಲ್ಲೆಯ ಹೊಂಗನೂರು ಗ್ರಾಮದಲ್ಲಿ ನೂತನ ದೇವಸ್ಥಾನ ನಿರ್ಮಾಣಕ್ಕೆ ಸಹಾಯ ಧನ ನೀಡಿದ ದಾನಿಗಳನ್ನು ಟ್ರಸ್ಟ್ ಪದಾಧಿಕಾರಿಗಳು ಸನ್ಮಾನಿಸಿದರು.



ಶ್ರೀರಂಗಪಟ್ಟಣದಲ್ಲಿ ಲೀವರ್ ಸಮಸ್ಯೆಯಿಂದ ಬಳಲುತ್ತಿರುವ ಮನೋಜ್-ಸಹನಾ ದಂಪತಿಯ ಒಂದು ವರ್ಷದ ಪುತ್ರ ಅನ್ವಿಕ್ ಚಿಕಿತ್ಸಾ ವೆಚ್ಚಕ್ಕಾಗಿ ಮಂಡ್ಯ ರಕ್ಷಣಾ ವೇದಿಕೆ ಕಾರ್ಯಕರ್ತರು ಸಾರ್ವಜನಿಕರಿಂದ ಹಣ ಸಂಗ್ರಹಿಸಿದರು.

ಅಪರಿಚಿತ ಪುರುಷನ ಶವ ಪತ್ತೆ

ಕಿಕ್ಕೇರಿ: ಕಿಕ್ಕೇರಮ್ಮ ದೇವಸ್ಥಾನದ ಬಳಿಯ ಅಮಾನಿಕೆರೆಯಲ್ಲಿ ಅಪರಿಚಿತ ಪುರುಷನ ಶವ ಗುರುವಾರ ಪತ್ತೆಯಾಗಿದೆ. ಕಿಕ್ಕೇರಿ ಪೊಲೀಸರಿಗೆ ಸಾರ್ವಜನಿಕರು ಮಾಹಿತಿ ನೀಡಲಾಗಿ ಶವವನ್ನು ಕೆರೆಯಿಂದ ಪೊಲೀಸರು ಹೊರ ತೆಗೆದಿದ್ದಾರೆ. ಮೃತನ ದೇಹಕ್ಕೆ ಹಗ್ಗದಿಂದ ಕಲ್ಲುಕಟ್ಟಿಕೊಂಡು ನೀರಿಗೆ ಬಿದ್ದಿರುವ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಅಸಹಜ ಸಾವು ಎಂದು ಶಂಕಿಸಲಾಗಿದೆ. ಮೃತ ವ್ಯಕ್ತಿಗೆ ಸುಮಾರು 50 ವರ್ಷ ವಯಸ್ಸಾಗಿದ್ದು, 5 ಅಡಿ ಎತ್ತರ, ದುಂಡು ಮುಖ, ಎಣ್ಣೆಗೆಂಪು ಮೈಬಣ್ಣ, ಬೊಕ್ಕು ತಲೆ ಇದೆ. ಕಡುನೀಲಿ ಬಣ್ಣದ ಒಳಉಡುಪು, ಹಸಿರು ಕಪ್ಪು ಬಿಳಿ ಬಣ್ಣದ ಚೌಕುಳಿಯ ಅರ್ಧ ತೋಳಿನ ಟಿಷರ್ಟ್ ಹಾಗೂ ಗೀರುಗಳಿರುವ ಅರ್ಧ ತೋಳಿನ ಅಂಗಿಯನ್ನು ಧರಿಸಿದ್ದಾನೆ. ಮಾಹಿತಿಗಾಗಿಕಿಕ್ಕೇರಿ ಪೊಲೀಸ್‌ಠಾಣೆಗೆ ಮೊ9480804861 ಸಂಪರ್ಕಿಸಲು ಕೋರಲಾಗಿದೆ.

ದೇಶಿ ಬೀಜ ಸಂರಕ್ಷಣೆ, ಬೆಳೇಲಿ ವೈವಿಧ್ಯತೆ ಅಗತ್ಯ

ಆಗಲೇ ರೈತರು ಹೆಚ್ಚಿನ ಇಳುವರಿ ಪಡೆಯಲು ಸಾಧ್ಯ: ಡಾ.ಕೆ.ಸಿ.ನಾರಾಯಣಸ್ವಾಮಿ | ಕೃಷಿ ವಿವೀಲಿ ಬೀಜೋತ್ಸವ, ಪೂರ್ವ ಮುಂಗಾರು ಆಂದೋಲನ

• **ಕನ್ನಡಪ್ರಭ ವಾರ್ತೆ** ಮಂಡ್ಯ

ದೇಶಿ ಬೀಜ ಸಂರಕ್ಷಣೆಗೆ ರೈತರು ಒತ್ತು ನೀಡಿ, ಬೆಳೆಯಲ್ಲಿ ವೈವಿಧ್ಯತೆ ಅಳವಡಿಸಿಕೊಂಡಲ್ಲಿ ಆರ್ಥಿಕ ಸಂಕಷ್ಟದಿಂದ ಪಾರಾಗಬಹುದು ಎಂದು ವಿ.ಸಿ.ಫಾರ್ಮ್‌ಕೃಷಿವಿಜ್ಞಾನಗಳವಿಶ್ವವಿದ್ಯಾಲಯದ ಕುಲಪತಿ ಡಾ.ಕೆ.ಸಿ.ನಾರಾಯಣಸ್ವಾಮಿ ಸಲಹೆ ನೀಡಿದರು.

ತಾಲೂಕಿನ ವಿ.ಸಿ.ಫಾರ್ಮ್ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ್ದ ಬೀಜೋತ್ಸವ ಹಾಗೂ ಪೂರ್ವ ಮುಂಗಾರು ಆಂದೋಲನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಉತ್ತಮ ಬೀಜ ಬಳಕೆ ಮಾಡಿದಲ್ಲಿ ಬೆಳೆ ಸಮೃದ್ಧ ಬೆಳೆದು ರೈತರು ಹೆಚ್ಚಿನ ಇಳುವರಿ ಪಡೆದು ಆರ್ಥಿಕವಾಗಿ ಸದೃಢರಾಗಲು ಸಾಧ್ಯ ಎಂದರು.

ಇಂದಿನ ಹವಾಮಾನ ವೈಪರೀತ್ಯ ಹಾಗೂ ನೀರಿನ ಕೊರತೆಯ ಪರಿಸ್ಥಿತಿಯಲ್ಲಿ ಕಡಿಮೆ ನೀರಿನಲ್ಲಿ ಬೆಳೆಯ ಬಹುದಾದ ಬೆಳೆಗಳನ್ನು ರೈತರು ಅಳವಡಿಸಿ ಕೊಳ್ಳಬೇಕು. ನೀರಿನಸದ್ಬಳಕೆಯನ್ನುಸಮರ್ಪಕವಾಗಿ ನಿರ್ವಹಿಸುವ ಜೊತೆಗೆ ಬೆಳೆಯಲ್ಲಿ ವೈವಿಧ್ಯತೆ ಅಳವ ಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ರೈತರು ದೇಶಿ ಬೀಜಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಹೆಚ್ಚಿನ ಗಮನ ಹರಿಸಬೇಕು. ರೈತರ ಬಳಿಯಲ್ಲಿ ಉತ್ತಮ ಗುಣಮಟ್ಟದ ಹಾಗೂ ವಿಶಿಷ್ಟ ಲಕ್ಷಣಗಳಿರುವ ದೇಶಿ ಬೀಜಗಳು ಕಂಡುಬಂದಲ್ಲಿ ಅವುಗಳನ್ನು ವಿಶ್ವವಿದ್ಯಾಲಯಕ್ಕೆ ತಿಳಿಸಬೇಕು. ಅಂತಹ ಬೀಜಗಳನ್ನು ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಿ ಇತರ ರೈತರಿಗೆ ಹಂಚುವ ಕಾರ್ಯ ವನ್ನು ವಿಶ್ವವಿದ್ಯಾಲಯ ಕೈಗೊಳ್ಳಲಿದೆ ಎಂದು ತಿಳಿಸಿದರು.

ವಿವಿಯಲ್ಲಿ ಉತ್ತಮ ಗುಣಮಟ್ಟದ ಬೀಜಗಳು ಲಭ್ಯವಿದ್ದು, ರೈತರು ಅವುಗಳ ಕುರಿತು ಮಾಹಿತಿ ಪಡೆದುವೈಜ್ಞಾನಿಕಪದ್ಧತಿಯಲ್ಲಿಕೃಷಿಕೈಗೊಳ್ಳಬೇಕು. ಕಳೆದ ವರ್ಷ ಸುಮಾರು 5 ಸಾವಿರ ಟನ್ ಬೀಜೋತ್ಪಾದನೆಮಾಡಿರುವುದುವಿಶ್ವವಿದ್ಯಾಲಯಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದರು.

ಕೃಷಿ ಶಿಕ್ಷಣ, ಸಂಶೋಧನೆ ಹಾಗೂ ವಿಸ್ತರಣಾ ಚಟುವಟಿಕೆಗಳನ್ನು ಮತ್ತಷ್ಟು ಉನ್ನತ ಮಟ್ಟಕ್ಕೆ ಕೊಂಡೊಯ್ಯಲು ವಿಶ್ವವಿದ್ಯಾಲಯ ಬದ್ಧವಾಗಿದೆ. ಸಂಶೋಧನೆಯಿಂದ ಅಭಿವೃದ್ಧಿಪಡಿಸಿದ ಉತ್ತಮ ತಳಿಗಳನ್ನು ವಿಸ್ತರಣಾ ಚಟುವಟಿಕೆಗಳ ಮೂಲಕ ರೈತರಿಗೆ ತಲುಪಿಸುವಲ್ಲಿ ವಿವಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ನಿವೃತ್ತ ಕುಲಸಚಿವ ಡಾ.ಬಸವಗೌಡ ಮಾತನಾಡಿ, ಉತ್ತಮ ಬೀಜವನ್ನು ಉತ್ತಮ ಮಣ್ಣಿನಲ್ಲಿ ಬಿತ್ತಿದರೆ ರೈತರಿಗೆ ಉತ್ತಮ ಇಳುವರಿ ದೊರೆಯುತ್ತದೆ. ರೈತರಿಗಾಗಿ ಇಂತಹ ವಿಶೇಷ ಕಾರ್ಯಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿಯೂ ಆಯೋಜಿಸಬೇಕು. ಈ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಸರ್ಕಾರ ಉಚಿತ ಬಸ್ ಪಾಸ್ ಸೌಲಭ್ಯ ಕಲ್ಪಿಸಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

ಇಂದಿನ ದಿನಗಳಲ್ಲಿ ಕೃಷಿಗೆ ಹೆಚ್ಚಿನ ಮಹತ್ವ ದೊರೆಯುತ್ತಿದೆ. ಕೃಷಿ ಉದ್ಯಮದಲ್ಲಿ ಸಾಕಷ್ಟು ಅವ ಕಾಶಗಳಿವೆ. ರೈತರು ಸ್ವಾವಲಂಬಿಗಳಾಗಿ ಸಂತೋ ಷದಿಂದ ಬದುಕಲು ಕೃಷಿ ಉದ್ಯಮದ ಅವಕಾಶ ಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ವಿವಿ ಸಂಶೋಧನಾ ನಿರ್ದೇಶಕ ಡಾ.ಜಿ.ಎಂ.ದೇವಗಿರಿ ಅಧ್ಯಕ್ಷತೆ ವಹಿಸಿದ್ದರು. ವಿಸ್ತರಣಾ ನಿರ್ದೇಶಕ ಡಾ.ಸಿ.ರಾಮ ಚಂದ್ರ, ಕುಲಸಚಿವರಾದ ಡಾ.ಪಿ.ಎಸ್. ಫಾತಿಮಾ, ಶಿಕ್ಷಣ ನಿರ್ದೇಶಕರಾದ ಡಾ.ಎನ್.ಶಿವಕುಮಾರ್, ಸಹ ಸಂಶೋಧನಾ ನಿರ್ದೇಶಕರಾದ ಡಾ.ಬಿ.ಎಸ್. ಬಸವರಾಜು, ಬೀಜ ಘಟಕದ ವಿಶೇಷಾಧಿಕಾರಿ ಡಾ.ಎಸ್.ಬಿ.ಯೋಗಾನಂದ ಉಪಸ್ಥಿತರಿದ್ದರು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಬೆಂಗಳೂರು ಕೃಷಿ ವಿವಿ ಪ್ರಾಧ್ಯಾಪಕ ಡಾ.ತಿಮ್ಮೇಗೌಡ ಹಾಗೂ ದೇಶಿ ತಳಿಗಳ ಸಂರಕ್ಷಕ ಡಾ.ಕೆ.ಪಿ.ಕೃಷ್ಣಪ್ರಸಾದ್ ರೈತರಿಗೆ ಉಪಯುಕ್ತ ಮಾಹಿತಿಯನ್ನು ನೀಡಿದರು. ವಿಶೇಷವಾಗಿ 30ಕ್ಕೂ ಅಧಿಕ ಮಳಿಗೆಗಳು ಭಾಗವಹಿಸಿ ರೈತರಿಗೆ ವಿವಿಧ ಕೃಷಿ ತಂತ್ರಜ್ಞಾನಗಳು, ಬೀಜಗಳು ಹಾಗೂ ನವೀನ ಪದ್ಧತಿಗಳ ಕುರಿತು ಮಾಹಿತಿ ನೀಡಿದವು.

ವಿವಿ ವ್ಯಾಪ್ತಿಗೆ ಒಳಪಡುವ ಮಂಡ್ಯ, ಮೈಸೂರು, ಚಾಮರಾಜನಗರ, ಹಾಸನ ಹಾಗೂ ಕೊಡಗು ಜಿಲ್ಲೆಗಳಿಂದ ಪ್ರಾಧ್ಯಾಪಕರು, ವಿಜ್ಞಾನಿಗಳು, ವಿದ್ಯಾರ್ಥಿಗಳು, ಸಾರ್ವಜನಿಕರು, ರೈತರು ಹಾಗೂ ದೇಶಿ ತಳಿಯ ಸಂರಕ್ಷಕರು ಭಾಗವಹಿಸಿದ್ದರು.





ಮಂಡ್ಯ ತಾಲೂಕಿನ ವಿ.ಸಿ.ಫಾರ್ಮ್ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ನಡೆದ ಬೀಜೋತ್ಸವ ಹಾಗೂ ಪೂರ್ವ ಮುಂಗಾರು ಆಂದೋಲನವನ್ನು ಕುಲಪತಿ ಡಾ.ಕೆ.ಸಿ.ನಾರಾಯಣಸ್ವಾಮಿ ಉದ್ಘಾಟಿಸಿದರು(ಎಡಚಿತ್ರ). ಬೀಜೋತ್ಸವದಲ್ಲಿ ತೆರೆದಿದ್ದ ಮಳಿಗೆಗಳಲ್ಲಿ ರೈತರು ವಿವಿಧ ಕೃಷಿ ತಂತ್ರಜ್ಞಾನಗಳು, ಬೀಜಗಳು ಹಾಗೂ ನವೀನ ಪದ್ಧತಿಗಳ ಕುರಿತು ಮಾಹಿತಿ ಪಡೆದರು.

ಭಕ್ತರ ಸಮ್ಮುಖ ಅದ್ಧೂರಿಯಾಗಿ ನಡೆದ ಸಿಡಿರಣ್ಣ ಸಿಡಿ ಉತ್ಸವ



ಮದ್ದೂರಮ್ಮನವರ ಸಿಡಿ ಉತ್ಸವವು ವಿಜೃಂಭಣೆಯಿಂದ ಜರುಗಿತು.

ಮದ್ದೂರು: ಶ್ರೀ ಮದ್ದೂರಮ್ಮನವರ ವರಪುತ್ರ ಸಿಡಿರಣ್ಣನವರ ಸಿಡಿ ಉತ್ಸವ ಗುರುವಾರ ಮಧ್ಯಾಹ್ನ ವಿವಿಧೆಡೆಗಳಿಂದ ಆಗಮಿಸಿದ್ದ ಸಹಸ್ರಾರು ಭಕ್ತಾದಿಗಳ ಸಮ್ಮುಖದಲ್ಲಿ ಅದ್ಧೂರಿಯಾಗಿ ಜರುಗಿತು.

ಪ್ರತಿ ವರ್ಷ ಶ್ರೀ ಮದ್ದೂರಮ್ಮನವರ ಅಗ್ನಿಕೊಂಡೋತ್ಸವದ ಮರುದಿನ ಸಡಗರ-ಸಂಭ್ರಮದ ಸಿಡಿ ಉತ್ಸವ ನೆರವೇರಿಸುತ್ತಾ ಬರಲಾಗುತ್ತಿದೆ. ಗುರುವಾರ ಮಧ್ಯಾಹ್ನ ಮೈಸೂರು, ಬೆಂಗಳೂರು ಹೆದ್ದಾರಿ ಬದಿಯ ಮೂಲ ದೇವಾಲಯದ ಹೊರ ಆವರಣದಲ್ಲಿ ಸಾವಿರಾರು ಭಕ್ತ ಸಮೂಹದ ಜಯಘೋಷಗಳೊಡನೆ ಉತ್ಸವವು ವಿಜೃಂಭಣೆಯಿಂದ ನೆರವೇರಿತು.

ಸ್ಥಳೀಯ ಹಾಗೂ ರಾಜ್ಯದ ನಾನಾ ಕಡೆಗಳಿಂದ ಆಗಮಿಸಿದ್ದ ಸಹಸ್ರಾರು ಭಕ್ತಾದಿಗಳು ಸಿಡಿ ಉತ್ಸವದಲ್ಲಿ ಪಾಲ್ಗೊಂಡ ರಲ್ಲದೇ ನೂತನ ವಧು- ವರರು ಭಾಗವಹಿ ಸುವ ಮೂಲಕ ಬಾಯಿಬೀಗ ಇನ್ನಿತರೆ ಹರಕೆ- ಹವನಗಳನ್ನು ಪೂರೈಸಿದರು.

ಸಿಡಿ ವೇಳೆ ನವಜಾತ ಶಿಶುಗಳೂ ಸೇರಿದಂತೆ ಮಕ್ಕಳನ್ನು ಸಿಡಿಯ ಕಾಗಡಿಯಲ್ಲಿ ಸುತ್ತಿಸಿದರೆ ಯಾವುದೇ ವ್ಯಾದಿಗಳು ದೂರಾಗುವುದೆಂಬ ಪ್ರತೀತಿ ಹಿನ್ನೆಲೆಯಲ್ಲಿ ಮಕ್ಕಳನ್ನು ಪೋಷಕರು ಸಿಡಿ ವೇಳೆ ಅಲಂಕೃತ ಕಾಗಡಿ(ತೊಟ್ಟಿಲು)ಯಲ್ಲಿಟ್ಟು ಸುತ್ತಿಸುವ ಮೂಲಕ ಧನ್ಯತೆ ಮೆರೆದರು.

ಉತ್ಸವದ ಆರಂಭಕ್ಕೂ ಮುನ್ನ ಮದ್ದೂರ ಮ್ಮನವರ ವರಪುತ್ರ ಸಿಡಿರಣ್ಣನವರನ್ನು ನಗರದ ಮಠಮನೆಯಿಂದ ಹೆಬ್ಬಾರೆಗಳ ಸಹಿತ ಮೆರವಣಿಗೆಯೊಂದಿಗೆ ಸೋಮೇ ಗೌಡರ ಬೀದಿ, ದೊಡ್ಡಿ ಬೀದಿ ಮೂಲಕ ಮದ್ದೂರಮ್ಮನವರ ಮೂಲ ದೇವಾಲಯಕ್ಕೆ ಕರೆತರಲಾಯಿತು.

ಬಿಗಿ ಬಂದೋಬಸ್ತ್: ಸಿಡಿರಣ್ಣ ಉತ್ಸವದ ಅಂಗವಾಗಿ ಅಪಾರ ಸಂಖ್ಯೆಯ ಭಕ್ತಾದಿಗಳು ಪಾಲ್ಗೊಂಡ ಹಿನ್ನೆಲೆಯಲ್ಲಿ ಮದ್ದೂರು ಪೊಲೀಸರು ಬಿಗಿ ಬಂದೋಬಸ್ತ್ ಕೈಗೊಂಡಿದ್ದರಲ್ಲದೆ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಹಲವು ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಿದರು.

ಬಿಎಸ್ವೈ ಅಭಿಮಾನೋತ್ಸವಕ್ಕೆ ತೆರಳಿದ ಬಿಜೆಪಿ ಕಾರ್ಯಕರ್ತರು



ಬಿಎಸ್ವೈ ಅಭಿಮಾನೋತ್ಸವಕ್ಕೆ ಬಿಜೆಪಿ ಕಾರ್ಯಕರ್ತರು ಪ್ರಯಾಣ ಬೆಳೆಸಿದರು.

ಮಂಡ್ಯ: ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ 50 ವರ್ಷಗಳರಾಜಕೀಯಸಾರ್ಥಕಜೀವನದಅಂಗವಾಗಿಚಿತ್ರದುರ್ಗದಲ್ಲಿ ಆಯೋಜಿಸಿರುವ ಅಭಿಮಾನೋತ್ಸವಕ್ಕೆ ಜಿಲ್ಲಾ ಬಿಜೆಪಿ ರೈತ ಮೋರ್ಚಾ ಸೇರಿ ಹಲವು ಕಾರ್ಯಕರ್ತರು ಪ್ರಯಾಣ ಬೆಳೆಸಿದರು. ಚಿತ್ರದುರ್ಗಕ್ಕೆ ಆಗಮಿಸಲಿರುವ ಯಡಿಯೂರಪ್ಪ ಅವರಿಗೆ ಅದ್ದೂರಿ 'ಪುರ ಪ್ರವೇಶ' ಸ್ವಾಗತ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಬಿಜೆಪಿ ರೈತ ಮೋರ್ಚಾ ಕಾರ್ಯಕರ್ತರು ತಮ್ಮ ನೆಚ್ಚಿನ ನಾಯಕನನ್ನು ಬರಮಾಡಿಕೊಳ್ಳಲು ಮತ್ತು ಅಭಿನಂದಿಸಲು ಉತ್ಸಾಹದಿಂದ ಚಿತ್ರದುರ್ಗಕ್ಕೆ ತೆರಳಿದ್ದಾರೆ. ಈ ವೇಳೆ ಮಾತನಾಡಿದ ರೈತ ಮೋರ್ಚಾದ ರಾಜ್ಯ ಕಾರ್ಯದರ್ಶಿ ಎಚ್.ಆರ್.ಅಶೋಕ್, ರೈತಪರ ಹೋರಾಟಗಾರ, ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಅವರ 50 ವರ್ಷಗಳ ಸಾರ್ಥಕ ರಾಜಕೀಯ ಬದುಕಿನ ಸವಿನೆನಪಿಗಾಗಿ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಜಿಲ್ಲೆಯಾದ್ಯಂತ ಸಹಸ್ರಾರು ಸಂಖ್ಯೆಯಲ್ಲಿ ಅಭಿಮಾನಿಗಳು ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದರು. ಈ ವೇಳೆ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಜವರೇಗೌಡ , ತಾಲೂಕು ಅಧ್ಯಕ್ಷ ಎಂ.ಸಿ.ವರದರಾಜು , ಬೇಳೂರು ಬೋಮೇಶ್, ವೈರಮುಡಿ , ಕೃಷ್ಣ ಹೆಮ್ಮಿಗೆ , ವಿನಯ್, ಸುರೇಶ್ ಕನ್ನಂಬಾಡಿ ಸೇರಿದಂತೆ ಇತರರು ಇದ್ದರು. **ತಡೆಯೊಡಿಸಿ ವಿಶೇಷ ಪೂಜೆ :** ಬಿಎಸ್ವೈ ಅಭಿಮಾನೋತ್ಸವ ಯಶಸ್ವಿಯಾಗಿ ನಡೆಯಲಿ ಎಂದು ಪ್ರಾರ್ಥಿಸಿ ಅಭಿಮಾನಿಗಳು ನಗರದ ಶಕ್ತಿ ದೇವತೆ ಕಾಳಿಕಾಂಬ ದೇಗುಲದಲ್ಲಿ ಅಷ್ಟ ದಿಕ್ಕುಗಳಿಗೆ ತಡೆಯೊಡಿಸಿ ವಿಶೇಷ ಪೂಜೆ ಸಲ್ಲಿಸಿದರು.

ಚಲನಚಿತ್ರ ನಟಿ ಎಂ.ಅಕ್ಷತಾಗೆ ಅಭಿನಂದನೆ ಕಾರ್ಯಕ್ರಮ ಇಂದು



ಪಾಂಡವಪುರ: ಫಿಲಂಫೇರ್‌ಪ್ರಶಸ್ತಿ ಪುರಸ್ಕೃತ ಚಲನಚಿತ್ರ ನಟಿ, ರಂಗಭೂಮಿ ಕಲಾವಿದೆ ಎಂ.ಅಕ್ಷತಾರಿಗೆ ಮೇ 9ರಂದು ಪಟ್ಟಣದ ಕನ್ನಡ ಸಾಹಿತ್ಯ ಭವನದಲ್ಲಿ ಅಭಿನಂದನೆ ಸಮಾರಂಭ ಆಯೋಜಿಸಲಾಗಿದೆ. ಕನ್ನಡ ಸಾಹಿತ್ಯ ಪರಿಷತ್ತು, ಮಕ್ಕಳ ಸಾಹಿತ್ಯ ಪರಿಷತ್ತು ಹಾಗೂ ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಆಶ್ರಯದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಅಂದು ಸಂಜೆ 5.30ಕ್ಕೆ ಕೋಳಿ ಎಸ್ರು ಚಲನಚಿತ್ರ ಪ್ರದರ್ಶನ ಮತ್ತು ಸಂವಾದ ನಡೆಯಲಿದೆ. ಕೆಂಗೇರಿ ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷ ನಿಶ್ಚಲಾನಂದಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ, ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಅಧ್ಯಕ್ಷತೆಯಲ್ಲಿ, ಮಾಜಿ ಶಾಸಕ ಸಿ.ಎಸ್.ಪುಟ್ಟರಾಜು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ನಿರ್ದೇಶಕಿ ಚಂಪಕ ಶೆಟ್ಟಿ, ಚಲನಚಿತ್ರ ನಟರಾದ ಪ್ರಕಾಶ್ ಪಿ.ಶೆಟ್ಟಿ, ಮಂಜು ನಟನ ಭಾಗವಹಿಸಲಿದ್ದಾರೆ ಎಂದು ಸಂಘಟಕರಾದ ಎಚ್.ಆರ್.ಧನ್ಯಕುಮಾರ್, ಪ್ರಕಾಶ್ ಮೇನಾಗರ ತಿಳಿಸಿದ್ದಾರೆ.

ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸೇವೆ ಕಡಿತ: ರೈತರಿಂದ ಪ್ರತಿಭಟನೆ



ಕೆ.ಎಂ.ದೊಡ್ಡಿ ಸಮುದಾಯ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವಂತೆ, ಆಸ್ಪತ್ರೆಯಲ್ಲಿ ಸೌಲಭ್ಯ ಕಡಿತಗೊಳಿಸಿರುವ ಕ್ರಮ ಖಂಡಿಸಿ ರೈತ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಕೆ.ಎಂ.ದೊಡ್ಡಿ: ಸಮುದಾಯ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವಂತೆ ಹಾಗೂ ವೈದ್ಯಕೀಯಸೇವೆಗಳನ್ನುಕಡಿತಗೊಳಿಸಿರುವಕ್ರಮಖಂಡಿಸಿರೈತಸಂಘದಕಾರ್ಯಕರ್ತರು ಆಸ್ಪತ್ರೆ ಆವರಣದಲ್ಲಿ ಪ್ರತಿಭಟನೆ ನಡೆಸಿದರು.

ಈ ಹಿಂದೆ ಇದ್ದ ಹಲವು ವೈದ್ಯಕೀಯ ಸೇವೆಗಳನ್ನು ಕಡಿತಗೊಳಿಸಿ, ವಿಭಾಗದ ವೈದ್ಯರನ್ನು ವರ್ಗಾವಣೆ ಮಾಡಿರುವ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ಆಗಮಿಸುವ ರೋಗಿಗಳಿಗೆ ಸಾಕಷ್ಟು ಸಮಸ್ಯೆ ಉಂಟಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿ, ಸರ್ಕಾರ ಮತ್ತು ಆರೋಗ್ಯ ಇಲಾಖೆ ವಿರುದ್ಧ ಧಿಕ್ಕಾರ ಕೂಗಿ ಪ್ರತಿಭಟನೆ ನಡೆಸಿದರು.

ಜಿಲ್ಲಾ ರೈತಸಂಘದ ಉಪಾಧ್ಯಕ್ಷ ಕೆ. ರಾಮಲಿಂಗೇಗೌಡ ಮಾತನಾಡಿ, ಪಟ್ಟಣವು ಪ್ರಮುಖ ವಾಣಿಜ್ಯ ಕೇಂದ್ರವಾಗಿ ಬೆಳೆಯುತ್ತಿದೆ. ಈ ಭಾಗದಲ್ಲಿ 25 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಹೊಂದಿದ್ದು, 5 ಉಪ ಆರೋಗ್ಯ ಕೇಂದ್ರಗಳು ಇವೆ. ಪ್ರತಿನಿತ್ಯ ನೂರಾರು ರೋಗಿಗಳು ಆಸ್ಪತ್ರೆಗೆ ಬರುತ್ತಾರೆ, ತಜ್ಞ ವೈದ್ಯರನ್ನು ವರ್ಗಾವಣೆ ಮಾಡಿ ಆಸ್ಪತ್ರೆಯನ್ನು ಅವನತಿಯತ್ತ ನೂಕುತ್ತಿದೆ ಎಂದು ಕಿಡಿಕಾರಿದರು.

ಮದ್ದೂರು- ಮಳವಳ್ಳಿ ಮುಖ್ಯರಸ್ತೆಯಲ್ಲಿರುವ ಸಮುದಾಯ ಆರೋಗ್ಯ ಕೇಂದ್ರವನ್ನು ಸರ್ಕಾರ ಮತ್ತು ಕುಟುಂಬ ಆರೋಗ್ಯ ಕಲ್ಯಾಣ ಇಲಾಖೆಯೂ ಹೊಸ ಮಾರ್ಗದರ್ಶಿಯನ್ನು ಹೊರಡಿಸಿ, ಕೆಳದರ್ಜೆಗೆ ಇರಿಸಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಾಡಲು ಹೊರಟಿರುವ ಕ್ರಮವನ್ನು ಕೂಡಲೇ ಕೈಬಿಡಬೇಕು ಎಂದು ಒತ್ತಾಯಿಸಿದರು.

ನಂತರ ರೈತ ಮುಖಂಡರು ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಜಗದೀಶ್ ಕುಮಾರ್‌ರವರಿಗೆ ಮನವಿ ಪತ್ರ ಸಲ್ಲಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸರ್ಕಾರಕ್ಕೆ ಹಾಗೂ ಇಲಾಖೆಗೆ ಗಮನಕ್ಕೆ ತರುವಂತೆ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ತಾಲೂಕು ಘಟಕದ ಅಧ್ಯಕ್ಷ ಪ್ರಭುಲಿಂಗು, ಮಳವಳ್ಳಿ ತಾಲೂಕು ಘಟಕದ ಅಧ್ಯಕ್ಷ ಬಸವರಾಜು, ರೈತ ಮುಖಂಡರಾದ ಸೊ.ಶಿ.ಪ್ರಕಾಶ್, ತಾಲೂಕು ಕಾರ್ಯದರ್ಶಿ ಕೆ.ಪಿ.ದೊಡ್ಡಿ ಪುಟ್ಟಸ್ವಾಮಿ, ಮಣಿಗೆರೆ ರಾಮಣ್ಣ, ಬೊಪ್ಪಸಮುದ್ರ ಮಲ್ಲೇಶ್, ಹೊಸಹಳ್ಳಿ ಶಿವಣ್ಣ, ಪ್ರಗತಿಪರ ಸಂಘಟನೆಯ ಕರಡಕೆರೆ ಯೋಗೇಶ್, ಬಿಳಿಗೌಡ, ರಾಮಣ್ಣ ಸೇರಿ ರೈತಸಂಘದ ಕಾರ್ಯಕರ್ತರು ಉಪಸ್ಥಿತರಿದ್ದರು.

ದಾರ್ಶನಿಕರ ಸ್ಮರಣೆ | ಬದರಿಕೊಪ್ಪಲಿನಲ್ಲಿ ನಡೆದ ಮಹರ್ಷಿ ಭಗೀರಥ ಜಯಂತ್ಯುತ್ಸವದಲ್ಲಿ ಸಚಿನ್ ಚಲುವರಾಯಸ್ವಾಮಿ

ಭರತ ಭೂಮಿಗೆ ನೀರು ಹರಿಸಿದ ಬಹುದೊಡ್ಡ ಶಕ್ತಿ ಭಗೀರಥ

• **ಕನ್ನಡಪ್ರಭ ವಾರ್ತೆ** ನಾಗಮಂಗಲ

ಮಹರ್ಷಿ ಭಗೀರಥ ಒಂದು ಜಾತಿ, ವರ್ಗಕ್ಕೆ ಸೀಮಿತವಾದ ವ್ಯಕ್ತಿಯಾಗದೆ ಭರತ ಭೂಮಿಗೆ ನೀರು ಹರಿಸಿದ ಬಹುದೊಡ್ಡ ಶಕ್ತಿಯಾಗಿದ್ದಾರೆ ಎಂದು ಎಂಡಿಸಿಸಿ ಬ್ಯಾಂಕ್ ಅಧ್ಯಕ್ಷ ಸಚಿನ್ ಚಲುವರಾಯಸ್ವಾಮಿ ಅಭಿಪ್ರಾಯಪಟ್ಟರು.

ಪಟ್ಟಣ ಬದರಿಕೊಪ್ಪಲಿನಲ್ಲಿ ಮಂಗಳವಾರ ಸಂಜೆ ಆಯೋಜಿಸಿದ್ದ ತಾಲೂಕು ಮಟ್ಟದ ಮಹರ್ಷಿ ಭಗೀರಥ ಜಯಂತ್ಯುತ್ಸವ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿ, ಬಡತನದ ನಡುವೆಯೇ ಉಪ್ಪು ತಯಾರು ಮಾಡಿ ಜೀವನ ನಿರ್ವಹಣೆ ಮಾಡುತ್ತಿದ್ದ ಉಪ್ಪಾರ ಸಮುದಾಯವನ್ನು ಶೈಕ್ಷಣಿಕ ಮತ್ತು ಆರ್ಥಿಕವಾಗಿ ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಸರ್ಕಾರ ಹಲವು ಯೋಜನೆ ಜಾರಿಗೊಳಿಸಿದೆ. ಸಮುದಾಯದ ಪ್ರತಿಯೊಬ್ಬರೂ ಕೂಡ ಸರ್ಕಾರದ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ಸ್ವಾವಲಂಬಿ ಜೀವನ ನಡೆಸಬೇಕು ಎಂದರು. ಜಿಲ್ಲಾ ಉಪ್ಪಾರ ಸಂಘದ ಮುಖಂಡ ದುದ್ದ ಚಂದ್ರಶೇಖರ್ ಮಾತನಾಡಿ, ಉಪ್ಪಾರ ಸಮುದಾಯ ಸಂಘಟಿತರಾಗಿ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು. ಸಮುದಾಯದ ಮಕ್ಕಳು ವಿದ್ಯಾವಂತರಾಗಿ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಬೇಕು, ಮಹರ್ಷಿ ಭಗೀರಥ ಅವರ ತತ್ವ- ಆದರ್ಶಗಳನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಂಡಲ್ಲಿ ಉತ್ತಮ ಸಮಾಜ ನಿರ್ಮಿಸಬಹುದಾಗಿದೆ ಎಂದರು.

ಸಮುದಾಯದ ಮುಖ್ಯಸ್ಥೆ ಮಂಜುಳ ಅವರು ಮಹರ್ಷಿ ಭಗೀರಥರ ಮಹತ್ವ ಕುರಿತು ಪ್ರಧಾನ ಭಾಷಣ ಮಾಡಿದರು. ಅಯ್ಯನ ಸರಗೂರಿನ ಮಲೆ ಮಹದೇಶ್ವರ ಸ್ವಾಮಿ ಎಣ್ಣೆಮಜ್ಜನ ಸೇವಾ ಸಮಿತಿಯ ರಂಗಸ್ವಾಮಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ವೇದಿಕೆಯಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳಿಸಿ ತೇರ್ಗಡೆ ಹೊಂದಿರುವ ಸಮುದಾಯದ 30ಕ್ಕೂ ಹೆಚ್ಚು ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಇದಕ್ಕೂ ಮುನ್ನ ಮಹರ್ಷಿ ಭಗೀರಥರ ಭಾವಚಿತ್ರವನ್ನು ಸರ್ವಾಲಂಕೃತ ತೆರೆದ ವಾಹನದಲ್ಲಿರಿಸಿ ಪಟ್ಟಣದ ಟಿ.ಬಿ.ಬಡಾವಣೆಯ ಬಿಜಿಎಸ್ ವೃತ್ತದಿಂದ ಬದರಿಕೊಪ್ಪಲು ವರೆಗೆ ಪೂರ್ಣಕುಂಭ ದೊಂದಿಗೆ ಮೆರವಣಿಗೆ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ಪುರಸಭೆ ಮಾಜಿ ಉಪಾಧ್ಯಕ್ಷೆ ವಸಂತಲಕ್ಷ್ಮೀ ಅಶೋಕ್, ಮಾಜಿ ಸದಸ್ಯೆ ರೂಪಾ ಮಂಜುನಾಥ್, ಮುಖ್ಯಾಧಿಕಾರಿ ವೀಣಾ, ನಿವೃತ್ತ ಶಿಕ್ಷಕ ಜಯರಾಜು, ಅರಣ್ಯ ಇಲಾಖೆಯ ಪಾಲಹಳ್ಳಿ ಸೋಮಣ್ಣ, ಶಿವಲಿಂಗಯ್ಯ, ಕೃಷಿಪತ್ತಿನ ಸಹಕಾರ ಸಂಘದ ಉಪಾಧ್ಯಕ್ಷ ಮಲ್ಲನಕಟ್ಟೆ ಕುಮಾರ್, ಉದ್ಯಮಿ ಆನಂದ್, ನಗುವಿನಹಳ್ಳಿ ಮಂಜು, ಚಾಮನಕೊಪ್ಪಲು ಉಮೇಶ್, ಹಿರಿಯಣ್ಣ, ಗ್ರಾಮದ ಮುಖ್ಯಸ್ಥರಾದ ಮಂಜುನಾಥ್, ಬಿ.ಆರ್.ಕುಮಾರ್, ತಿಮ್ಮಪ್ಪ, ಶ್ರೀನಿವಾಸ್, ಚಂದ್ರು, ಸತೀಶ್, ರಘು, ಸ್ವಾಮಿ, ಅಶೋಕ್, ಕಾವ್ಯಮುರಳಿ, ಶಿಕ್ಷಕ ಕೃಷ್ಣಮೂರ್ತಿ, ಸುರೇಶ್ ಉಪ್ಪಾರ್‌ಸೇರಿದಂತೆ ನೂರಾರು ಮಂದಿ ಇದ್ದರು.



ನಾಗಮಂಗಲ ಬದರಿಕೊಪ್ಪಲಿನಲ್ಲಿ ನಡೆದ ತಾಲೂಕು ಮಟ್ಟದ ಮಹರ್ಷಿ ಭಗೀರಥ ಜಯಂತ್ಯುತ್ಸವದಲ್ಲಿ ಎಸ್ಸೆಸ್ಸೆಲ್ಸಿ, ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಸುದ್ದಿ ಸಿಂಚನ

ನಾಳೆ ವಿದ್ಯುತ್ ವ್ಯತ್ಯಯ

ಮಂಡ್ಯ: 66/11 ಕೆ.ವಿ ಕೆ.ಐ.ಎ.ಡಿ.ಬಿ. ಕೊಲಕಾರನದೊಡ್ಡಿ ಮತ್ತು ತುಂಬಕೆರೆ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯನಿರ್ವಹಣೆ ಹಮ್ಮಿಕೊಂಡಿರುವುದರಿಂದ ಮೇ 10 ರಂದು ಬೆಳಗ್ಗೆ 9 ರಿಂದ ಸಂಜೆ 6 ಗಂಟೆವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ವಿತರಣಾ ಕೇಂದ್ರ ನಗರ ಪ್ರದೇಶಗಳಾದ ಗುತ್ತಲು, ಫ್ಯಾಕ್ಟರಿ ವೃತ್ತ, ಕೈಗಾರಿಕ ಬಡಾವಣೆಗಳು, ಎಂ.ಸಿ.ರಸ್ತೆ, ತಾವರೆಗೆರೆ, ನೆಹರು ನಗರ, ಉದಯಗಿರಿ, ಸಾದತ್ ಮೊಹಲ್ಲ, ಚನ್ನಯ್ಯ ಬಡಾವಣೆ, ಸಿದ್ದಾರ್ಥ ಬಡಾವಣೆ, ಬೆಂಗಳೂರು ಮುಖ್ಯ ರಸ್ತೆಯ ಹೆಬ್ಬಾಳ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಗ್ರಾಮಾಂತರ ಪ್ರದೇಶಗಳಾದ ಶ್ರೀನಿವಾಸಪುರ ಗೇಟ್, ಹನಕೆರೆ ಐ.ಪಿ ವ್ಯಾಪ್ತಿ, ಕೀಲಾರ ಐ.ಪಿ ವ್ಯಾಪ್ತಿ, ಬಸವನಪುರ ಐ.ಪಿ. ವ್ಯಾಪ್ತಿ, ಬೂದನೂರು, ಭೂತನ ಹೊಸೂರು, ಚನ್ನಪ್ಪನ ದೊಡ್ಡಿ, ಹಂಬರಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಕೊಲಕಾರನದೊಡ್ಡಿ ವಿದ್ಯುತ್ ವಿತರಣಾ ಕೇಂದ್ರದ ಗ್ರಾಮಾಂತರ ಪ್ರದೇಶಗಳಾದ ತಗ್ಗಹಳ್ಳಿ, ಕೋಲಕಾರನದೊಡ್ಡಿ, ಹೆಮ್ಮಿಗೆ, ಸೂನಗನಹಳ್ಳಿ, ಪುರ, ಲೋಕಸರ, ಹಳುವಾಡಿ, ಕಮ್ನಾಯಕನಹಳ್ಳಿ, ಟಿ. ಮಲ್ಲಿಗೆರೆ, ಕಬ್ಬನಹಳ್ಳಿ, ತಿಮ್ಮನಹೊಸೂರು. ಬಿ. ಹೊಸೂರು ಗೋಪನಹಳ್ಳಿ ಯಡಗನಹಳ್ಳಿ, ಮಾದರಹಳ್ಳಿ ಮತ್ತು ಸುತ್ತಮುತ್ತಲಿನ ಗ್ರಾಮಗಳು. ತುಂಬಕೆರೆ ವಿದ್ಯುತ್ ವಿತರಣಾ ಕೇಂದ್ರ ಗ್ರಾಮಾಂತರ ಪ್ರದೇಶಗಳಾದ ಹೊರ ಹೊಡಾಘಟ್ಟ, ಕೀಲಾರ, ಹನಕೆರೆ, ಹಳೆ ಬೂದನೂರು, ಹೊಸಬೂದನೂರು, ಈಚಗೆರೆ. ಹಂಬರಹಳ್ಳಿ, ಆಲಕೆರೆ, ನಲ್ಲಹಳ್ಳಿ, ಕಚ್ಚಿಗೆರೆ, ಶ್ರೀನಿವಾಸಪುರ ಗೇಟ್, ಹೊನಗಾನಹಳ್ಳಿಮಠ, ತುಂಬಕೆರೆ, ಚಾಮಲಾಪುರ, ಉಪ ಉಮ್ಮಡಹಳ್ಳಿ, ಬಸವನಪುರ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಚಾವಿಸನಿನಿ, ಕಾ ಮತ್ತು ಪಾ ವಿಭಾಗದ ಕಾರ್ಯ ನಿರ್ವಾಹಕ ಅಭಿಯಂತರರು (ವಿ) ಎಸ್ ಅನಿತಾಬಾಯಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಾಸಕರಿಂದ ಭೂಮಿಪೂಜೆ



ಶ್ರೀರಂಗಪಟ್ಟಣ: ತಾಲೂಕಿನ ಮಹದೇವಪುರ ಗ್ರಾಮದ ಬಳಿ ₹22 ಕೋಟಿ ವೆಚ್ಚದ ಮೊರಾರ್ಜಿ ದೇಸಾಯಿ ವಸತಿ ಶಾಲಾ ಕಟ್ಟಡ ನಿರ್ಮಾಣ ಕಾಮಗಾರಿಗೆ ಶಾಸಕ ರಮೇಶ್ ಬಂಡಿಸಿದ್ದೇಗೌಡ ಬುಧವಾರ ಭೂಮಿ ಪೂಜೆ ನೆರವೇರಿಸಿದರು. ಬಳಿಕ ಶಾಸಕರು ಮಾತನಾಡಿ, ಗುತ್ತಿಗೆದಾರರು ನಿಗದಿತ ಸಮಯದಲ್ಲಿ ಯಾವುದೇ ಲೋಪವಿಲ್ಲದಂತೆ ಸುಸಜ್ಜಿತ ಕೊಠಡಿಗಳು, ಶೌಚಾಲಯ ಸೇರಿ ಅಗತ್ಯ ಕಾಮಗಾರಿ ನಡೆಸುವಂತೆ ಇದೇ ವೇಳೆ ತಾಕೀತು ಮಾಡಿದರು. ಬಿಸಿಲಿನ ಬೇಗೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ತಾಲೂಕಿನ ಪ್ರತಿಗ್ರಾಮಗಳಲ್ಲಿ ಜನ-ಜಾನುವಾರುಗಳ ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗದಂತೆ ಎಚ್ಚರ ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಎಲರ್‌ಎಐ ಪರೀಕ್ಷಾ ಕೇಂದ್ರ ಸ್ಥಾಪನೆಗೆ ಹಾಗೂ ಇತರೆ ಕೈಗಾರಿಕಾ ಘಟಕಗಳನ್ನು ಸ್ಥಾಪಿಸಲು ತಾಲೂಕಿನ ವ್ಯಾಪ್ತಿಯಲ್ಲಿ 1800 ಎಕರೆಗಿಂತ ಹೆಚ್ಚು ಜಮೀನು ಲಭ್ಯ ಇರುವುದಾಗಿ ತಾಲೂಕು ಆಡಳಿತದಿಂದ ತಿಳಿದುಬಂದಿದೆ. ಈ ಸಂಬಂಧ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಅವರ ಬಳಿ ಚರ್ಚಿಸಿ, ಅಗತ್ಯ ಕ್ರಮ ವಹಿಸುವುದಾಗಿ ಉತ್ತರಿಸಿದರು.ಈ ವೇಳೆ ವಸತಿ ಶಾಲೆಗಳ ಜಿಲ್ಲಾ ಅಧಿಕಾರಿ ಮಂಜುಳ, ತಾಪಂ ಇಒ ಚಂದ್ರ, ನೀರಾವರಿ ಇಲಾಖೆ ಸೌಮ್ಯ, ಅಭಿಲಾಷ್, ತಾಪಂ ಮಾಜಿ ಸದಸ್ಯ ಕಾಳೇಗೌಡ, ಡಿಸಿಸಿ ಬ್ಯಾಂಕ್ ಮಾಜಿ ನಿರ್ದೇಶಕ ಬಸವರಾಜು, ಗ್ರಾಪಂ ಮಾಜಿ ಅಧ್ಯಕ್ಷ ದೇವರಾಜು, ಮಾಜಿ ಉಪಾಧ್ಯಕ್ಷೆ ನಿಂಗಮ್ಮ, ಪಿಎಸ್ಐ ವಿನೋದ್ ಕುಮಾರ್ ಇದ್ದರು.

ಮಹಿಳಾ ಕಾಂಗ್ರೆಸ್ ಪದಾಧಿಕಾರಿಗಳಿಗೆ ನೇಮಕಾತಿ ಪತ್ರ ವಿತರಣೆ, ಪದಗ್ರಹಣ

ಬೂತ್ ಮಟ್ಟದಲ್ಲಿ ಮಹಿಳಾ ಕಾರ್ಯಕರ್ತರನ್ನು ಸಂಘಟಿಸುವಂತೆ ಕರೆ ನೀಡಿದ ಅಧ್ಯಕ್ಷರು

• **ಕನ್ನಡಪ್ರಭ ವಾರ್ತೆ** ಮಂಡ್ಯ

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಹಿಳಾ ಕಾಂಗ್ರೆಸ್ ಸಮಿತಿ ಆಯೋಜಿಸಿದ್ದ ಸಮಾರಂಭದಲ್ಲಿ ಪದಗ್ರಹಣ ಮಾಡಿದ ನೂತನ ಪದಾಧಿಕಾರಿಗಳಿಗೆ ನೇಮಕಾತಿ ಆದೇಶ ಪತ್ರ ವಿತರಿಸಲಾಯಿತು.

ಈ ವೇಳೆ ಮಾತನಾಡಿದ ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ಶುಭದಾಯಿನಿ, ಕಾಂಗ್ರೆಸ್ ಪಕ್ಷ ಮಹಿಳಾ ಸಬಲೀಕರಣ ಮತ್ತು ಆರ್ಥಿಕ ಅಭಿವೃದ್ಧಿಗೆ ಹೆಚ್ಚು ಆದ್ಯತೆ ನೀಡಿದೆ. ಸ್ವಾತಂತ್ರ್ಯ ನಂತರ ದೇಶದಲ್ಲಿ ಪಕ್ಷವು ಉದ್ಯೋಗ, ಉದ್ಯಮ, ಆರ್ಥಿಕ ಭದ್ರತೆ, ಶೈಕ್ಷಣಿಕ ನೆರವು, ಸಾಲ ಸೌಲಭ್ಯ ಹೀಗೆ ಹಲವು ಜನಪರ ಯೋಜನೆಗಳನ್ನು ಜಾರಿ ಮಾಡಿ ಮಹಿಳಾ ಪ್ರಗತಿಗೆ ಮುಂದಾಗಿದೆ ಎಂದರು.

ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ಪಂಚ ಗ್ಯಾರಂಟಿಗಳನ್ನು ಮಹಿಳೆಯರಿಗೆ ಸಮರ್ಪಿಸಿ ಮಹಿಳಾಭ್ಯುದಯ ಸರ್ಕಾರವಾಗಿದೆ. ನೂತನ ಪದಾಧಿಕಾರಿಗಳು ಇಂದಿನಿಂದಲೇ ಪ್ರತಿ ಬೂತ್ ಮಟ್ಟದಲ್ಲಿ ಮಹಿಳಾ ಕಾರ್ಯಕರ್ತರನ್ನು ಸಂಘಟಿಸಿ ಸರ್ಕಾರದ ಗ್ಯಾರಂಟಿ ಯೋಜನೆಗಳು ಪ್ರತಿಯೊಬ್ಬ ಅರ್ಹ ಮಹಿಳೆಗೆ ತಲುಪುವಂತೆ ಮಾಡಬೇಕು ಎಂದು ಹೇಳಿದರು.

ಸವಾಲುಗಳನ್ನು ಎದುರಿಸುವ ರಾಜಕೀಯ ಪ್ರಜ್ಞೆ ಹೆಚ್ಚಿಸಿ ಮುಂದಿನ ದಿನಗಳಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಮತ್ತು ಸಂಸತ್/ವಿಧಾನಸಭೆ ಚುನಾವಣೆಗಳಲ್ಲಿ ನಾವೆಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಿ ಕಾಂಗ್ರೆಸ್ ಪಕ್ಷವನ್ನು ಮತ್ತಷ್ಟು ಬಲಪಡಿಸೋಣ ಎಂದು ಕರೆ ನೀಡಿದರು. ಕಾಂಗ್ರೆಸ್ ಮುಖಂಡ ತ್ಯಾಗರಾಜ್ ಮಾತನಾಡಿ, ಸಚಿವ ಚಲುವರಾಯಸ್ವಾಮಿ, ಶಾಸಕ ರವಿಕುಮಾರ್ ಸೇರಿ ಜಿಲ್ಲೆಯ ಎಲ್ಲಾ ಶಾಸಕರು ಜೋಡೆತ್ತಿನಂತೆ ಜಿಲ್ಲೆಯ ಅಭಿವೃದ್ಧಿಗಾಗಿ ಹಗಲಿರುಳು ಕೆಲಸ ಮಾಡುತ್ತಿದ್ದಾರೆ. ಮುಂದಿನ ಚುನಾವಣೆಗಳಲ್ಲಿ ಮಹಿಳಾ ಪದಾಧಿಕಾರಿಗಳು ಒಗ್ಗಟ್ಟಿನಿಂದ ಕಾಂಗ್ರೆಸ್ ಪಕ್ಷವನ್ನು ಮತ್ತೊಮ್ಮೆ ಅಧಿಕಾರಕ್ಕೆ ತರುವಲ್ಲಿ ಈಗಿನಿಂದಲೇ ಸನ್ನದ್ಧರಾಗಬೇಕು ತಿಳಿಸಿದರು.

ಇದೇ ವೇಳೆ ಜಿಲ್ಲಾ ಮಹಿಳಾ ಕಾಂಗ್ರೆಸ್ ಸಮಿತಿ ನೂತನ ಉಪಾಧ್ಯಕ್ಷರಾಗಿ ಶಾರದಾ ರಮೇಶ್, ಸಂಘಟನಾ ಕಾರ್ಯದರ್ಶಿಯಾಗಿ ವೀಣಾ ಶಂಕರ್ ಸೇರಿ ಹಲವರಿಗೆ ಆದೇಶ ಪತ್ರಗಳನ್ನು ನೀಡಿ ಪಕ್ಷ ಸಂಘಟನೆಯ ಜವಾಬ್ದಾರಿ ನೀಡಲಾಯಿತು. ಜಿಲ್ಲಾ ಕಾಂಗ್ರೆಸ್ ನಾಯಕ ರೇವಣ್ಣ, ತಾಪಂ ಮಾಜಿ ಸದಸ್ಯ ಪ್ರಶಾಂತ್‌ಬಾಬು, ಸುಜಾತ ಸಿದ್ದಯ್ಯ, ಸುನೀತಾ ರಾಜೇಶ್, ಜ್ಯೋತಿ, ಶಕುಂತಲಾ, ಪ್ರಚಾರ ಸಮಿತಿ ಅಧ್ಯಕ್ಷ ಅಭಿಲಾಷ್, ಕಚೇರಿ ವ್ಯವಸ್ಥಾಪಕ ಪ್ರಕಾಶ್ ಮತ್ತಿತರರಿದ್ದರು.



ಮಂಡ್ಯ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನೂತನ ಪದಾಧಿಕಾರಿಗಳಿಗೆ ನೇಮಕಾತಿ ಆದೇಶ ಪತ್ರ ವಿತರಿಸಲಾಯಿತು.

ದೇವಲಾಪುರ ರಾಜ್ಯ ಹೆದ್ದಾರಿ ಅಡ್ಡ ಮೋರಿಗೆ ತಡೆಗೋಡೆ ನಿರ್ಮಾಣ, ನೆನಗುದಿಗೆ ಬಿದ್ದಿದ್ದ ರಸ್ತೆಗೆ ಡಾಂಬರೀಕರಣ

ಕಳೆದ ತಿಂಗಳು ಕನ್ನಡಪ್ರಭ ಪತ್ರಿಕೆಯಲ್ಲಿ ಪ್ರಕಟಗೊಂಡಿದ್ದ ವರದಿಗೆ ಸ್ಪಂದಿಸಿದ ಕೆಶಿಪ್ ಅಧಿಕಾರಿಗಳು

• **ಕರಡಹಳ್ಳಿ ಸೀತಾರಾಮು**
ಕನ್ನಡಪ್ರಭ ವಾರ್ತೆ ನಾಗಮಂಗಲ

ತಾಲೂಕಿನ ದೇವಲಾಪುರ ಹ್ಯಾಂಡ್‌ಪೋಸ್ಟ್‌ನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮುಂಭಾಗದಲ್ಲಿ ಹಾದು ಹೋಗಿರುವ ಮಾಗಡಿ - ಜಲಸೂರು ರಾಜ್ಯ ಹೆದ್ದಾರಿಯ ಅಡ್ಡ ಮೋರಿಗೆ ಸುರಕ್ಷತಾ ತಡೆಗೋಡೆ ನಿರ್ಮಿಸುವ ಜೊತೆಗೆ, ಎರಡು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಪಟ್ಟಣದ ಮಂಡ್ಯ ರಸ್ತೆಯಲ್ಲಿರುವ ಅಮ್ಮನಕಟ್ಟೆ ಸಮೀಪ ಗದ್ದೆಭೂವನಹಳ್ಳಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಾಜ್ಯ ಹೆದ್ದಾರಿಗೆ ಬುಧವಾರ ಡಾಂಬರೀಕರಣ ಮಾಡಿ ಹೆದ್ದಾರಿಯ ವಾಹನಗಳ ಸಂಚಾರಕ್ಕೆ ಅನುಕೂಲ ಮಾಡಿಕೊಟ್ಟಿದ್ದಾರೆ.

ಈ ಹಿಂದೆ ಕನ್ನಡಪ್ರಭ ಪತ್ರಿಕೆಯಲ್ಲಿ ಪ್ರಕಟವಾದ ವರದಿಗೆ ಸ್ಪಂದಿಸಿರುವ ಕೆಶಿಪ್ ಅಧಿಕಾರಿಗಳು, ಅಡ್ಡಮೋರಿಗೆ ತಡೆಗೋಡೆ ಜೊತೆಗೆ ರಸ್ತೆ ಡಾಂಬರೀಕರಣ ಹಾಗೂ ಹ್ಯಾಂಡ್‌ಪೋಸ್ಟ್ ಜಂಕ್ಷನ್‌ನ ಮೂರು ರಸ್ತೆಗಳಲ್ಲಿ ಮಾರ್ಗ ಸೂಚಿಸುವ ನಾಮಫಲಕ ಅಳವಡಿಸುವ ಜೊತೆಗೆ, ಹೈಮಾಸ್ಟ್ ವಿದ್ಯುತ್ ದೀಪ ಅಳವಡಿಸಲು ಅಗತ್ಯ ಕ್ರಮವಹಿಸಿದ್ದಾರೆ.

ಪಟ್ಟಣದ ಮಂಡ್ಯ ರಸ್ತೆಯ ಒಂದು ಭಾಗದಲ್ಲಿ ಅರ್ಧಕ್ಕೇನಿಂತಿದ್ದ ರಸ್ತೆ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಕಳೆದೊಂದು ವಾರದಿಂದ ಕಾರ್ಯ ಪ್ರವೃತ್ತರಾಗಿ ರಸ್ತೆಬದಿಯಲ್ಲಿ ಚರಂಡಿ ನಿರ್ಮಾಣ ಕಾರ್ಯ ಪೂರ್ಣಗೊಳಿಸಿದ್ದಾರೆ. ರಸ್ತೆಯ ಡಾಂಬರೀಕರಣಕ್ಕಾಗಿ ಸಿದ್ಧತೆ ಮಾಡಲು ಟಿಪ್ಪರ್, ರೋಡ್ ರೋಲರ್, ಹಿಟಾಚಿ ಯಂತ್ರಗಳು ಹಗಲಿರುಳು ಕೆಲಸ ಮಾಡುತ್ತಿದ್ದು ಇನ್ನೆರಡು ದಿನದಲ್ಲಿ ಈ ರಸ್ತೆ ಡಾಂಬರೀಕರಣವೂ ಪೂರ್ಣಗೊಳ್ಳುವ ಸಾಧ್ಯತೆ ಇದೆ.





ದೇವಲಾಪುರ ಹ್ಯಾಂಡ್‌ಪೋಸ್ಟ್‌ನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮುಂಭಾಗದಲ್ಲಿ ಹಾದು ಹೋಗಿರುವ ರಾಜ್ಯ ಹೆದ್ದಾರಿ ಅಡ್ಡ ಮೋರಿಗೆ ಸುರಕ್ಷತಾ ತಡೆಗೋಡೆ ನಿರ್ಮಿಸಿರುವುದು(ಎಡಚಿತ್ರ).ನಾಗಮಂಗಲ ಮಂಡ್ಯ ರಸ್ತೆಯ ಅಮ್ಮನಕಟ್ಟೆ ಸಮೀಪ ಗದ್ದೆಭೂವನಹಳ್ಳಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಾಜ್ಯ ಹೆದ್ದಾರಿಗೆ ಡಾಂಬರೀಕರಣ ಮಾಡುತ್ತಿರುವುದು.

ಮಾಗಡಿ ಜಲಸೂರು ರಾಜ್ಯ ಹೆದ್ದಾರಿ ಕಾಮಗಾರಿ ಆರಂಭಗೊಂಡು 10 ವರ್ಷ ಕಳೆದರೂ ಸಹ ಕಾಮಗಾರಿ ನಿರ್ವಹಿಸುತ್ತಿರುವ ಕೆಶಿಪ್ ಅಧಿಕಾರಿಗಳು ವಿವಿಧ ಕಾರಣದ ನೆಪ ಹೇಳಿ ತಾಲೂಕು ವ್ಯಾಪ್ತಿಯ ಹಲವೆಡೆ ರಸ್ತೆ ಹಾಗೂ ಚರಂಡಿ ಕಾಮಗಾರಿಯನ್ನು ಅರ್ಧಕ್ಕೆ ನಿಲ್ಲಿಸಿದ್ದರು. ದೇವಲಾಪುರ ಹ್ಯಾಂಡ್ ಪೋಸ್ಟ್‌ನ ಸರ್ಕಾರಿ ಪ್ರಥಮದರ್ಜೆ ಕಾಲೇಜು ಮುಂಭಾಗದಲ್ಲಿನ ಹೆದ್ದಾರಿಯ ಅಡ್ಡ ಮೋರಿಗೆ ಸುರಕ್ಷತಾ ತಡೆಗೋಡೆ ನಿರ್ಮಿಸಿರಲಿಲ್ಲ.

ಕನ್ನಡಪ್ರಭ
ವರದಿ ಫಲಶೃತಿ

ಹ್ಯಾಂಡ್‌ಪೋಸ್ಟ್ ಜಂಕ್ಷನ್‌ನ ಮೂರು ರಸ್ತೆಗಳಲ್ಲಿ ಮಾರ್ಗ ಸೂಚಿಸುವ ನಾಮಫಲಕ ಹಾಕಿರಲಿಲ್ಲ. ಅಮ್ಮನಕಟ್ಟೆ ಸಮೀಪ ಗದ್ದೆಭೂವನಹಳ್ಳಿಗೆ ಸಂಪರ್ಕ ಕಲ್ಪಿಸುವ ರಾಜ್ಯ ಹೆದ್ದಾರಿಗೆ ಡಾಂಬರೀಕರಣ ಮಾಡಿರಲಿಲ್ಲ. ಪಟ್ಟಣದ ಮಂಡ್ಯ ರಸ್ತೆಯ ಒಂದು ಭಾಗದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ ಅರ್ಧಕ್ಕೇ ನಿಲ್ಲಿಸಲಾಗಿತ್ತು. ಇದರಿಂದಾಗಿ ಹೆದ್ದಾರಿಯಲ್ಲಿ ಪ್ರತಿನಿತ್ಯ ಸಾವಿರಾರು ವಾಹನಗಳ ಸಂಚಾರಕ್ಕೆ ಬಹಳಷ್ಟು ತೊಂದರೆಯಾಗುತ್ತಿತ್ತು. ಈ ಬಗ್ಗೆ ಕಳೆದ ಏ.4ರ ಕನ್ನಡಪ್ರಭ ಪತ್ರಿಕೆಯಲ್ಲಿ 'ಬಲಿಗಾಗಿ ಬಾಯ್ತೆರೆದ ತಡೆಗೋಡೆ ಇಲ್ಲದ ಅಡ್ಡಮೋರಿ' ಎಂಬ ತಲೆಬರಹದಲ್ಲಿ ವಿಶೇಷ ವರದಿ ಪ್ರಕಟವಾಗಿತ್ತು.

ಕೆಶಿಪ್ ಅಧಿಕಾರಿಗಳ ನಿರ್ಲಕ್ಷ್ಯವನ್ನು ಪತ್ರಿಕೆ ಹೊರಹಾಕಿತ್ತು. ಪತ್ರಿಕೆಯಲ್ಲಿ ಸುದ್ದಿ ಪ್ರಕಟವಾದ ಬಳಿಕ ಕಾರ್ಯಪ್ರವೃತ್ತರಾದ ಅಧಿಕಾರಿಗಳು ಸುಮಾರು ಎರಡು ವರ್ಷದಿಂದ ತಾಲೂಕು ವ್ಯಾಪ್ತಿಯಲ್ಲಿ ಬಾಕಿ ಉಳಿಸಿಕೊಂಡಿದ್ದ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಮುಂದಾಗಿರುವುದು ಶ್ಲಾಘನೀಯ.

ಭ್ರೂಣಲಿಂಗ ಪತ್ತೆ, ಹತ್ಯೆಗೆ ನನ್ನ ಸಹಕಾರವಿಲ್ಲ: ಮಂಜು ಸ್ಪಷ್ಟನೆ

ನನ್ನ ವಿರುದ್ಧ ಕೆಲವರಿಂದ ಅಪಪ್ರಚಾರ; ಶಾಸಕರ ಕಿಡಿ

• **ಕನ್ನಡಪ್ರಭ ವಾರ್ತೆ** ಕೆ.ಆರ್.ಪೇಟೆ



ತಾಲೂಕಿನ ಖಾಸಗಿ ಸ್ಕ್ಯಾನಿಂಗ್ ಕೇಂದ್ರಗಳಲ್ಲಿ ನಡೆದಿದೆ ಎನ್ನಲಾದ ಭ್ರೂಣ ಲಿಂಗ ಪತ್ತೆ ಹಾಗೂ ಹತ್ಯೆಗೆ ನನ್ನ ಸಹಕಾರವಿಲ್ಲ. ಕೆಲವರು ಮಾಧ್ಯಮಗಳ ಮೂಲಕ ನನ್ನ ವಿರುದ್ಧ ಅಪಪ್ರಚಾರ ನಡೆಸುತ್ತಿದ್ದಾರೆ ಎಂದು ಶಾಸಕ ಎಚ್.ಟಿ.ಮಂಜು ಸ್ಪಷ್ಟನೆ ನೀಡಿದರು.

ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ಶಾಸಕರು, ಪಟ್ಟಣದ ಖಾಸಗಿ ಸ್ಕ್ಯಾನಿಂಗ್ ಕೇಂದ್ರಗಳಲ್ಲಿ ನಡೆಯುತ್ತಿರುವ ಭ್ರೂಣಲಿಂಗ ಪತ್ತೆ ಕುರಿತು ನನ್ನ ಮಾತುಗಳನ್ನು ಕೆಲವು ಮಾಧ್ಯಮಗಳು ಮತ್ತು ವ್ಯಕ್ತಿಗಳು ಸರಿಯಾಗಿ ಅರ್ಥೈಸಿಕೊಳ್ಳದೆ ನನ್ನ ಸಹಮತವಿದೆ ಎಂದು ಅಪಪ್ರಚಾರ ನಡೆಸುತ್ತಿದ್ದಾರೆ ಎಂದು ಕಿಡಿಕಾರಿದರು.

ನನ್ನ ಕ್ಷೇತ್ರದಲ್ಲಿ ಯಾವುದೇ ಅಪ್ರಾಪ್ತರು ಭ್ರೂಣ ಹತ್ಯೆಗೆ ಒಳಗಾಗಿಲ್ಲ. ಹೊರಗಿನ ಕೆಲವು ಪ್ರಕರಣಗಳು ಪಟ್ಟಣದ ಖಾಸಗಿ ಸ್ಕ್ಯಾನಿಂಗ್ ಕೇಂದ್ರಗಳಲ್ಲಿ ಪತ್ತೆಯಾಗಿವೆ. ಇಂತಹ ಪ್ರಕರಣಗಳಿಗೆ ನನ್ನ ವಿರೋಧವಿದೆ. ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಸ್ಕ್ಯಾನಿಂಗ್ ಯಂತ್ರವಿದೆ. ಆದರೆ, ಇದನ್ನು ಬಳಕೆ ಮಾಡುವ ನುರಿತ ವೈದ್ಯ, ಸ್ಕ್ಯಾನಿಂಗ್ ತಜ್ಞರಿಲ್ಲ. ಸರ್ಕಾರಿ ವೈದ್ಯರು ಗರ್ಭಿಣಿಯರಿಗೆ ಸ್ಕ್ಯಾನಿಂಗ್ ಮಾಡಿಸಲು ಚೀಟಿ ಬರೆದರೆ ಅವರು ಖಾಸಗಿ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಹೋಗುತ್ತಾರೆ. ಅದು ಅಪರಾಧ ಎಂದು ಪರಿಗಣಿಸಿ ವೈದ್ಯರ ಮೇಲೆ ಕ್ರಮಕ್ಕೆ ಮುಂದಾಗಿರುವ ಬಗ್ಗೆ ನಾನು ಮಾತನಾಡಿದ್ದೇನೆ ಎಂದಿದ್ದಾರೆ.

ಸರ್ಕಾರ ತಪ್ಪು ನಿರ್ಧಾರಗಳಿಂದ ಸಾರ್ವಜನಿಕ ಆಸ್ಪತ್ರೆಗೆ ನುರಿತ ಸ್ಕ್ಯಾನಿಂಗ್ ತಜ್ಞರನ್ನು ನೇಮಕ ಮಾಡುವಂತೆ ನಾನು ಹಲವು ಸಲ ಆರೋಗ್ಯ ಸಚಿವರಿಗೆ ಮತ್ತು ಸಂಬಂಧಿಸಿದ ಇಲಾಖಾ ಅಧಿಕಾರಿಗಳ ಮುಂದೆ ಒತ್ತಡ ಹಾಕಿದ್ದೇನೆ. ಆದರೂ ನಮ್ಮ ಬೇಡಿಕೆಯನ್ನು ಸರ್ಕಾರ ಈಡೇರಿಸಿಲ್ಲಎಂದುಆಕ್ರೋಶ ವ್ಯಕ್ತಪಡಿಸಿದರು.

ತಾಲೂಕಿಗೆ ಅಗತ್ಯ ವೈದ್ಯಕೀಯ ಸಿಬ್ಬಂದಿಯನ್ನು ನೇಮಕ ಮಾಡಿದರೆ ಸರ್ಕಾರಿ ವೈದ್ಯರ ಮೇಲಿನ ಒತ್ತಡ ತಪ್ಪುತ್ತದೆ. ಈ ರೀತಿಯ ಸುಳ್ಳು ಸುದ್ದಿಗಳನ್ನು ಹರಡಿದರೆ ವೈದ್ಯರು ನಮ್ಮ ತಾಲೂಕಿಗೆ ಬರಲು ಹಿಂಜರಿಯುತ್ತಾರೆ ಎಂಬ ದೃಷ್ಟಿಯಿಂದ ನಾನು ಹೇಳಿದ್ದೇನೆ. ಭ್ರೂಣ ಪರೀಕ್ಷೆ ಮತ್ತು ಭ್ರೂಣ ಹತ್ಯೆಯಂತಹ ಪ್ರಕರಣಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ಪಾರದರ್ಶಕ ತನಿಖೆ ನಡೆಸಲಿ ಎಂದು ಆಗ್ರಹಿಸಿದರು.

ಸರ್ಕಾರಿ ವೈದ್ಯರು ಹೊರಗಿನ ಸ್ಕ್ಯಾನಿಂಗ್ ಕೇಂದ್ರಗಳಿಗೆ ಚೀಟಿ ಬರೆಯಲು ಕಾರಣವಾದ ಅಂಶಗಳನ್ನೂ ಪರಿಗಣಿಸಬೇಕು. ಅಗತ್ಯ ವೈದ್ಯಕೀಯ ಸಿಬ್ಬಂದಿ ನೇಮಕ ಮಾಡಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರ ಮೇಲಿನ ಕಾರ್ಯ ಒತ್ತಡವನ್ನು ತಪ್ಪಿಸಬೇಕೆಂದು ಒತ್ತಾಯಿಸಿದರು.

ನನ್ನ ವಿರುದ್ಧ ಕೆಲವರು ಸಕ್ರಿಯ ಅಪಪ್ರಚಾರದಲ್ಲಿ ನಿರತರಾಗಿದ್ದಾರೆ. ನಾನು ಯಾರೋ ಸಾಮಾಜಿಕ ಜಾಲತಾಣದಲ್ಲಿ ಬರುವ ಕಾಮೆಂಟ್ಸ್‌ಗೆ ಉತ್ತರ ಕೊಡುವುದಕ್ಕೆ ಹೋಗುವುದಿಲ್ಲ. ನಮ್ಮ ವಿರುದ್ಧ ಮಾಡುವ ಟೀಕೆಗಳು ಸಾಯುತ್ತವೆ. ನಾವು ಮಾಡುವ ಕೆಲಸಗಳು ಉಳಿಯುತ್ತವೆ ಎಂದು ಹೇಳಿದರು.

ಸಮಾಜ ಸೇವೆಯಿಂದ ಜನ ಮಾನಸದಲ್ಲಿರುವ ಉದಯ್ ಚಾರಿಟಬಲ್ ಟ್ರಸ್ಟ್: ರವಿ



ಹೊನ್ನಾಯಕನಹಳ್ಳಿಯಲ್ಲಿ ಪಂಕ್ತಿ ಸೇವೆ ಕಾರ್ಯಕ್ರಮದಲ್ಲಿ ಕದಲೂರು ಉದಯ್ ಚಾರಿಟಬಲ್ ಟ್ರಸ್ಟ್ ವತಿಯಿಂದ ಪಂಕ್ತಿ ಸೇವೆಗೆ ಆರ್ಥಿಕ ಧನ ಸಹಾಯ ನೀಡಲಾಯಿತು.

• **ಕನ್ನಡಪ್ರಭ ವಾರ್ತೆ** ಕೆ.ಎಂ.ದೊಡ್ಡಿ

ಮದ್ದೂರು ಕ್ಷೇತ್ರದ ಅಭಿವೃದ್ಧಿ ಜೊತೆಗೆ ಜನತೆಯ ಕಷ್ಟ-ಸುಖಗಳಿಗೆ ಸ್ಪಂದಿಸುತ್ತಿರುವ ಕದಲೂರು ಉದಯ್ ಚಾರಿಟಬಲ್ ಟ್ರಸ್ಟ್ ಸಮಾಜಮುಖಿ ಕಾರ್ಯಗಳಿಂದ ತಾಲೂಕಿನ ಜನಮಾನಸದಲ್ಲಿದೆ ಎಂದು ಟ್ರಸ್ಟಿ ಹಾಗೂ ಸಮಾಜ ಸೇವಕ ಕದಲೂರು ರವಿ ತಿಳಿಸಿದರು.

ಸಮೀಪದ ಮಠದ ಹೊನ್ನಾಯಕನಹಳ್ಳಿಯಲ್ಲಿ ಗ್ರಾಮಸ್ಥರು ಆಯೋಜಿಸಿದ್ದ ಶ್ರೀ ಮುತ್ತುರಾಯಸ್ವಾಮಿ, ಮಂಟೇಸ್ವಾಮಿ ಮತ್ತು ಶ್ರೀ ಚಾಮುಂಡೇಶ್ವರಿ ದೇವಿ ಮೆರವಣಿಗೆ ಪಂಕ್ತಿ ಸೇವೆ ಕಾರ್ಯಕ್ರಮದಲ್ಲಿ ಟ್ರಸ್ಟ್ ವತಿಯಿಂದ ಪಂಕ್ತಿ ಸೇವೆಗೆ ಆರ್ಥಿಕ ಸಹಾಯ ನೀಡಿ ಮಾತನಾಡಿದರು.

ಕಳೆದ 5 ವರ್ಷಗಳಿಂದ ಶಾಸಕ ಕೆ.ಎಂ. ಉದಯ್ ನೇತೃತ್ವದಲ್ಲಿ ಟ್ರಸ್ಟ್ ನಿರಂತರವಾಗಿ ಕ್ಷೇತ್ರದಲ್ಲಿ ಜನಸೇವೆಯಲ್ಲಿ ತೊಡಗಿದ್ದು, ಕ್ಷೇತ್ರದಲ್ಲಿನ ದೇವಾಲಯಗಳ ಜೀರ್ಣೋದ್ಧಾರ, ವಿವಾಹ, ಶಾಲೆಗಳ ಅಭಿವೃದ್ಧಿ, ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹ ಪೂರ್ವಕವಾಗಿ ಟ್ರಸ್ಟ್ ವತಿಯಿಂದ ಆರ್ಥಿಕ ಸಹಾಯ ನೀಡಿ ಉತ್ತೇಜಿಸಲಾಗಿದೆ. ಸ್ಥಳೀಯ ಉತ್ಸವಗಳಿಗೆ ಬೆಂಬಲ ನೀಡುವ ಮೂಲಕ ಸಕ್ರಿಯವಾಗಿದೆ ಎಂದರು.ಮದ್ದೂರು ಕ್ಷೇತ್ರವನ್ನು ಮಾದರಿಯಾಗಿ ರೂಪಿಸಲು ಶಾಸಕರು ಸರ್ಕಾರದಿಂದ ₹2 ಸಾವಿರ ಕೋಟಿಗೂ ಹೆಚ್ಚಿನ ಅನುದಾನ ತಂದು ಅಭಿವೃದ್ಧಿ ಕಾರ್ಯದಲ್ಲಿ ಮುಂಚೂಣಿಯಲ್ಲಿ ನಿರತರಾಗಿದ್ದಾರೆ. ಟ್ರಸ್ಟ್ ವತಿಯಿಂದ ಸಾಮಾಜಿಕ ಸೇವಾ ಕಾರ್ಯಗಳನ್ನು ನಿರಂತರವಾಗಿ ನಡೆಸುತ್ತಾ ಬಂದಿದ್ದು, ತಾಲೂಕಿನ ಶೈಕ್ಷಣಿಕ ಅಭಿವೃದ್ಧಿಗಾಗಿ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ವಿತರಣೆ, ಶಾಲಾ ಮಕ್ಕಳಿಗೆ ಉಚಿತ ಬ್ಯಾಗ್, ಪುಸ್ತಕ ವಿತರಣೆ, ಶಾಲಾ ವಿದ್ಯಾರ್ಥಿಗಳ ಪ್ರವೇಶ ಶುಲ್ಕ, ಉನ್ನತ ವಿದ್ಯಾಭ್ಯಾಸಕ್ಕೆ ಧನ ಸಹಾಯ ಮಾಡಿ ಕ್ಷೇತ್ರದ ವಿದ್ಯಾರ್ಥಿಗಳ ಅಭಿವೃದ್ಧಿಗೆ ಶ್ರಮಿಸಲಾಗಿದೆ ಎಂದು ಹೇಳಿದರು.

ಕ್ಷೇತ್ರ ವ್ಯಾಪ್ತಿ ಸುಮಾರು 50ಕ್ಕೂ ಹೆಚ್ಚಿನ ಶುದ್ಧ ಕುಡಿಯುವ ನೀರಿನ ಘಟಕಗಳು, ಕಡು ಬಡವರು, ನೊಂದವರಿಗೆ ಸಹಾಯ ಧನವನ್ನು ನೀಡಿ ಸಂಕಷ್ಟದಲ್ಲಿದ್ದ ಕುಟುಂಬಕ್ಕೆ ಆಸರೆಯಾಗುವ ಜೊತೆಗೆ ಮದ್ದೂರು ಉತ್ಸವವನ್ನು ಅದ್ದೂರಿಯಾಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು. ಈ ವೇಳೆ ಮುಖಂಡರಾದ ಮಹೇಂದ್ರ, ಮುತ್ತುರಾಜು, ಶಿವಣ್ಣ, ಸಂತೋಷ್, ಪುನೀತ್, ವಿಜಯ್, ಮನು, ಯೋಗಾನಂದ, ರಾಮಣ್ಣ, ಉಮೇಶ್ ಉಪಸ್ಥಿತರಿದ್ದರು.

ಮಳೆಗಾಗಿ ಪ್ರಾರ್ಥಿಸಿ ತಿಂಗಳ ಮಾಮನ ಮದುವೆ ಮಾಡಿಸಿದ ಗ್ರಾಮಸ್ಥರು

• **ಕನ್ನಡಪ್ರಭ ವಾರ್ತೆ** ಕಿಕ್ಕೇರಿ

ಗಡಿಭಾಗದ ಗೂಡೇಹೊಸಹಳ್ಳಿಯಲ್ಲಿ ಮಳೆಗಾಗಿ ವರುಣ ದೇವರನ್ನು ಪ್ರಾರ್ಥಿಸಿ, ರೈತಾಪಿ ಜನತೆ ತಿಂಗಳ ಮಾಮನಾದ ಚಂದಿರ ಮಾಮನ(ಸೂರ್ಯ-ಚಂದ್ರ) ಮದುವೆ ಮಾಡಿಸಿದರು.

ಈ ರೀತಿಯ ಮದುವೆ ಮಾಡುವುದರಿಂದ ಸಕಾಲದಲ್ಲಿ ಸಮೃದ್ಧಿಯಾಗಿ ಮಳೆ ಬೀಳಲಿದೆ ಎಂಬ ಜನಪದ ನಂಬಿಕೆಯಿಂದ ಇಡೀ ಗ್ರಾಮಸ್ಥರು ಒಂದೆಡೆ ಕೂಡಿ ವಿವಾಹದ ಸಂಭ್ರಮ ಆಚರಣೆಯಲ್ಲಿ ಭಾಗಿಯಾಗಿದ್ದರು.

ಗ್ರಾಮದ ಮಕ್ಕಳನ್ನು ವಾರದಿಂದ ಒಂದೆಡೆ ಕಲೆ ಹಾಕಿ ಮಳೆರಾಯ ಬರಲು ಜಾನಪದ ನಂಬುಗೆಯ ಮದುವೆ ಶಾಸ್ತ್ರ ಮಾಡಲು ಮುಂದಾದರು. ಮಕ್ಕಳನ್ನು ದೇವರಂತೆ ಪ್ರಾರ್ಥಿಸಿಕೊಂಡು ತಿಂಗಳ ಮಾಮನ ಮದುವೆ ನೆರವೇರಿಸಿದರೆ ಮಳೆ ತಪ್ಪದೆ ಬರಲಿದೆ ಎಂದು ಮದುವೆ ಶಾಸ್ತ್ರದ ವಿವಿಧ ಕಾರ್ಯಗಳಿಗೆ ಅಣಿಯಾದರು.

ಮದುವೆಗಾಗಿ ವರ ಹಾಗೂ ವಧುವಾಗಿ ಇಬ್ಬರು ಗಂಡು ಮಕ್ಕಳನ್ನೇ ಗ್ರಾಮದ ಮುಖಂಡರು ಹುಡುಕಾಡಿ ಆಯ್ಕೆ ಮಾಡಿಕೊಂಡರು. ವರವಾದ ಸೂರ್ಯದೇವನಾಗಿ ಕುಶಾಲ್, ಮಧುಮಗಳಾದ ಚಂದ್ರಮತಿಯಂತೆ ವಿಶಿತ್‌ರನ್ನು ವಧುವರರನ್ನಾಗಿ ಸಜ್ಜುಗೊಳಿಸಿದರು. ಕುಶಾಲ್‌ಗೆ ಮೈಸೂರು ಪೇಟ, ಬಿಳಿ ಷರ್ಟು, ಕಚ್ಚೆ ತೊಡಿಸಿದರೆ, ವಿಶಿತ್‌ಗೆ ಸೀರೆ ಕುಪ್ಪಸ, ಬಳೆ, ಒಡವೆ ತೊಡಿಸಿ ಶೃಂಗರಿಸಿದರು. ವರನಕಡೆಯಿಂದ ಕೌಶಲ್ಯಾ, ನಾಗೇಶ್ ಹಾಗೂ ವಧುವಿನ ಕಡೆಯಿಂದ ಭಾರತಿ ಲೋಕೇಶ್ ತಿಂಗಳ ಮಾಮನ ಮದುವೆಗೆ ಸಾರಥ್ಯ ವಹಿಸಿದರು.



ಗೂಡೇಹೊಸಹಳ್ಳಿ ಗ್ರಾಮಸ್ಥರು ಮಳೆಗಾಗಿ ಚಂದಮಾಮನ ಮದುವೆ ಮಾಡಿಸಿದರು.

ವಿವಾಹಕ್ಕೂ ಮುನ್ನ ವಾರದಿಂದ ಗ್ರಾಮದ ಪ್ರತಿ ಮನೆಗಳಿಗೆ ತೆರಳಿದ ಮಕ್ಕಳು ಮನೆ ಮನೆಗಳಲ್ಲಿ ಕೇಳಿ ರೊಟ್ಟಿ ಹಿಟ್ಟನ್ನು ತಂದರು. ಎಲ್ಲವನ್ನೂ ಒಂದೆಡೆ ಕಲೆಹಾಕಿ ನೀರಿನಿಂದ ಕಲೆಸಿ ಹದವಾಗಿ ರೊಟ್ಟಿ ತಯಾರಿಸಿದರು. 9 ದಿನಗಳ ಕಾಲ ನಡೆದ ಮದುವೆ ಶಾಸ್ತ್ರದಲ್ಲಿ ದಿನಕ್ಕೊಂದು ರೊಟ್ಟಿಯಂತೆ 9 ರೊಟ್ಟಿ ಹಾಗೂ 9 ಸಿಹಿ ಹೋಳಿಗೆ ತಯಾರಿಸಲಾಯಿತು. ರೊಟ್ಟಿಯ ಮೇಲೆ ನಿತ್ಯವೂ ಚಂದಿರನ ಚಿತ್ತಾರ ಬಿಡಿಸಿದರು. ಕಲೆ ಹಾಕಿದ್ದ ರೊಟ್ಟಿಗಳನ್ನು ಮದುವೆಯ ದಿನದಂದು ಮಕ್ಕಳು ಪೈಪೋಟಿಯಲ್ಲಿ ಪರಸ್ಪರ ಕಸಿಯಲು ಯತ್ನಿಸಿದರು. ಅಂತಿಮವಾಗಿ ಒಂದೆಡೆ ಕಲೆತು ಮಳೆರಾಯನ ಕುರಿತು ಹಾಡಿದರು. ನೃತ್ಯ ಮಾಡಿ 'ಬಾರೋ ಮಳೆರಾಯ'ಎಂದು ಮಳೆರಾಯನ ಕರೆದರು. ಪರಸ್ಪರ ನೀರು ಎರಚಾಡಿ ಸಂಭ್ರಮಿಸಿದರು. ಊರಿನ ಗ್ರಾಮಸ್ಥರು ಮಕ್ಕಳಿಗೆ ಸಾಥ್ ನೀಡಿ ಮಕ್ಕಳೊಂದಿಗೆ ತಾವು ನೃತ್ಯ ಮಾಡಿದರು.

ಗ್ರಾಮದಲ್ಲಿ ಮದುವೆ ಸಮಾರಂಭದಂತೆ ನಗುನಗುತ್ತ ವರ ಪೂಜೆ, ಬಳೆ, ಮಾಂಗಲ್ಯ ಶಾಸ್ತ್ರ ಸೇರಿದಂತೆ ವಿವಿಧ ಶಾಸ್ತ್ರಗಳನ್ನು ಆಚರಿಸಿ ವಿವಾಹ ಸಂಭ್ರಮವನ್ನು ಸವಿದರು. ಬಿಜುಗಿನ ಪೆಟ್ಟಿಗೆಯನ್ನು ಮಹಿಳೆಯರು ತಲೆ ಮೇಲೆ ಹೊತ್ತುಕೊಂಡು ಗಂಡು- ಹೆಣ್ಣಿನ ಪರವಾಗಿ ಮುಖಂಡರೊಂದಿಗೆ ಆಂಜನೇಯ ದೇಗುಲದಿಂದ ವೆಂಕಟೇಶ್ವರ ದೇಗುಲದವರೆಗೆ ಮೆರವಣಿಗೆಯಲ್ಲಿ ಸಾಗಿದರು. ಬಾವಿ ಮನೆ ಕುಮಾರ್, ನಾಗೇಶ್, ಜಿ.ಬಿ. ನಾಗೇಶ್, ರೇಣುಕಾ, ಜಯಮ್ಮ, ಭಾರತಿ, ಬೇಬಿ, ಲಕ್ಷ್ಮಮ್ಮ, ಶಾಂತಮ್ಮ ಮತ್ತಿತರರು ಭಾಗವಹಿಸಿದ್ದರು.

ಸೇವಾ ಕೈಂಕರ್ಯ | ಸರ್ಕಾರಿ ಶಾಲೆ ಉಳಿವಿಗೆ ಸಂಸ್ಥೆ ಮುಂದಾಗಿರುವುದಕ್ಕೆ ಸಚಿವ ಚಲುವರಾಯಸ್ವಾಮಿ ಶ್ಲಾಘನೆ

ಜೆಕೆ ಟೈರ್ ಇಂಡಸ್ಟ್ರೀಸ್‌ನಿಂದ 2 ಶಾಲಾ ಕೊಠಡಿಗಳ ನಿರ್ಮಾಣ

• **ಕನ್ನಡಪ್ರಭ ವಾರ್ತೆ** ಮಂಡ್ಯ

ತಾಲೂಕಿನ ತಗ್ಗಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಮೈಸೂರಿನ ಜೆಕೆ ಟೈರ್‌ಮತ್ತು ಇಂಡಸ್ಟ್ರೀಸ್ ಲಿಮಿಟೆಡ್ (ಜೆಕೆಟಿಐಎಲ್) ಸಂಸ್ಥೆ ನಿರ್ಮಿಸಿರುವ ಎರಡು ಶಾಲಾ ಕೊಠಡಿಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಉದ್ಘಾಟಿಸಿದರು.

ಸಂಸ್ಥೆ ವತಿಯಿಂದ ಸಾಮಾಜಿಕ ಹೊಣೆಗಾರಿಕೆ (ಸಿಎಸ್ ಆರ್) ಯೋಜನೆಯಡಿ ಸುಮಾರು ₹38 ಲಕ್ಷ ವೆಚ್ಚದಲ್ಲಿ ಶಾಲೆಯಲ್ಲಿ ನಿರ್ಮಾಣ ಮಾಡಿರುವ ಎರಡು ತರಗತಿ ಕೊಠಡಿಗಳನ್ನೊಳಗೊಂಡ ನೂತನ ಶಾಲಾ ಕಟ್ಟಡಗಳನ್ನು ಸಂಸ್ಥೆ ಮುಖ್ಯಸ್ಥರ ಸಮ್ಮುಖದಲ್ಲಿ ಸಚಿವರು ಉದ್ಘಾಟಿಸಿ, ಸರ್ಕಾರಿ ಶಾಲೆಗಳ ಉಳಿವಿಗೆ ಜೆಕೆ ಟೈರ್‌ಮತ್ತು ಇಂಡಸ್ಟ್ರೀಸ್ ಲಿಮಿಟೆಡ್ ಸಂಸ್ಥೆ ಮುಂದಾಗಿರುವುದಕ್ಕೆ ಶ್ಲಾಘನೆ ವ್ಯಕ್ತಪಡಿಸಿದರು.



ಮೈಸೂರಿನ ಜೆಕೆ ಟೈರ್‌ಮತ್ತು ಇಂಡಸ್ಟ್ರೀಸ್ ಲಿಮಿಟೆಡ್ (ಜೆಕೆಟಿಐಎಲ್) ಸಂಸ್ಥೆ ಉಪಾಧ್ಯಕ್ಷ ಈಶ್ವರ ರಾವ್, ಮಾನವ ಸಂಪನ್ಮೂಲ ವಿಭಾಗದ ಮುಖ್ಯಸ್ಥ ಜಗದೀಶ್‌ರನ್ನು ಅಭಿನಂದಿಸಲಾಯಿತು.

ಸರ್ಕಾರಿ ಶಾಲೆಗಳ ಉಳಿವಿಗೆ ಸರ್ಕಾರವು ಸಾಕಷ್ಟು ಯೋಜನೆಗಳ ನೀಡುವ ಜೊತೆಗೆ, ವಿದ್ಯಾರ್ಥಿಗಳಿಗೆ ಹಲವು ಸೌಲಭ್ಯಗಳನ್ನು ಕಲ್ಪಿಸುತ್ತಿದೆ. ಇದರ ಜೊತೆಗೆ ಖಾಸಗಿ ಸಂಸ್ಥೆಗಳು ಕೂಡ ಶಾಲಾ ಕೊಠಡಿ, ಶೌಚಾಲಯ ನಿರ್ಮಾಣ, ಕುಡಿಯುವ ನೀರಿನ ವ್ಯವಸ್ಥೆ ಸೇರಿ ಹಲವು ಸೌಲಭ್ಯಗಳನ್ನು ನೀಡುತ್ತಿವೆ. ಮಕ್ಕಳ ಪೋಷಕರು ಇದರ ಪ್ರಯೋಜನ ಪಡೆಯುವಂತೆ ಸಚಿವರು ಮನವಿ ಮಾಡಿದರು. ಸರ್ಕಾರಿ ಪ್ರೌಢಶಾಲೆಯಲ್ಲಿ 280ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, ಶಾಲೆಯಲ್ಲಿ ಕೊಠಡಿಗಳ ಕೊರತೆ ಇರುವ ಕಾರಣ ಸಂಸ್ಥೆಗೆ ಮನವಿ ಮಾಡಿದ್ದ ಹಿನ್ನೆಲೆಯಲ್ಲಿ ಮನವಿಗೆ ಸ್ಪಂದಿಸಿ ₹38 ಲಕ್ಷ ವೆಚ್ಚದಲ್ಲಿ ನಿರ್ಮಾಣ ಮಾಡಿಕೊಟ್ಟರು. ಇದೇ ವೇಳೆ ಶಾಲೆ ಎಸ್‌ಡಿಎಂಸಿ , ಕಾಲೇಜು ಆಡಳಿತ ಮಂಡಳಿ, ಗ್ರಾಮಸ್ಥರ ವತಿಯಿಂದ ಜೆಕೆ ಟೈರ್‌ಸಂಸ್ಥೆ ಉಪಾಧ್ಯಕ್ಷ ಈಶ್ವರ ರಾವ್, ಮಾನವ ಸಂಪನ್ಮೂಲ ವಿಭಾಗದ ಮುಖ್ಯಸ್ಥ ಜಗದೀಶ್ ಅವರನ್ನು ಅಭಿನಂದಿಸಲಾಯಿತು.

ಶ್ರೀರಂಗಪಟ್ಟಣ ಕ್ಷೇತ್ರದ ಶಾಸಕ ಎ.ಬಿ.ರಮೇಶ ಬಂಡಿಸಿದ್ದೇಗೌಡ, ವಿಧಾನ ಪರಿಷತ್ ಸದಸ್ಯರು, ಜಿಪಂ ಮಾಜಿ ಅಧ್ಯಕ್ಷ ತಗ್ಗಹಳ್ಳಿ ವೆಂಕಟೇಶ್ ಸೇರಿದಂತೆ ಶಿಕ್ಷಣ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಸಾರ್ವಜನಿಕ ಪ್ರಕಟಣೆ

ವಿದ್ಯುತ್ ವ್ಯತ್ಯಯ

ಮಂಡ್ಯ: ಚಿಕ್ಕಮಂಡ್ಯ ಎಂ.ಯು.ಎಸ್.ಎಸ್ ನಿಂದ ಹೊರಡುವ ಎಫ್-12 ಗೋಪಾಲಪುರನ ಐ.ಪಿ ಮಾರ್ಗದ ಲಿಂಕ್ ಲೈನ್ ಕಾಮಗಾರಿ ಇರುವುದರಿಂದ ಮೇ 9 ರಂದು ಬೆಳಗ್ಗೆ 10 ರಿಂದ ಸಂಜೆ 6 ಗಂಟೆವರಿಗೆ ವಿದ್ಯುತ್ ವ್ಯತ್ಯಯವಾಗಲಿದೆ. ಎಫ್-12 ಗೋಪಾಲಪುರನ ಐ.ಪಿ ಮಾರ್ಗದ ಗ್ರಾಮಗಳಾದ ತಾಲೂಕಿನ ಗೋಪಾಲಪುರ, ಎಚ್.ಕೋಡಿಹಳ್ಳಿ, ಎಚ್.ಕೋಡಿಹಳ್ಳಿ ಫಾರ್ಮ್, ಎಚ್.ಮಲ್ಲಿಗೆರೆ, ಎಚ್.ಮಲ್ಲಿಗೆರೆ ಫಾರ್ಮ್, ಜೀಗುಂಡಿಪಟ್ಟಣ, ಮತ್ತು ಬಿ. ಹೊಸೂರು ಕಾಲೋನಿ ಗ್ರಾಮಗಳಿಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಮಂಡ್ಯ ಚಾವಿಸನಿನಿ ಕೆರಗೋಡು ಉಪ ವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್(ವಿ) ಎಸ್. ಶ್ರೀಕಾಂತ್ ತಿಳಿಸಿದ್ದಾರೆ.

ನಿಸ್ವಾರ್ಥ ಸೇವಕರನ್ನು ಹೊಂದಿರುವ ಸಂಸ್ಥೆ ರೆಡ್‌ಕ್ರಾಸ್

ಮಾಂಡವ್ಯ ಪಿಯು ಕಾಲೇಜಲ್ಲಿ ವಿಶ್ವ ರೆಡ್‌ಕ್ರಾಸ್ ದಿನಾಚರಣೆ ಉದ್ಘಾಟಿಸಿ ಸಭಾಧ್ಯಕ್ಷೆ ಮೀರಾ ಶಿವಲಿಂಗಯ್ಯ ಪ್ರಶಂಸೆ

• **ಕನ್ನಡಪ್ರಭ ವಾರ್ತೆ** ಮಂಡ್ಯ

ಮಾನವೀಯತೆಯನ್ನು ಜೀವಂತವಾಗಿಡಲು, ವಿಶ್ವದಾದ್ಯಂತ ಜೀವಗಳನ್ನು ಉಳಿಸಲು ನಿಸ್ವಾರ್ಥ ಸೇವೆ ಮಾಡುವ ಲಕ್ಷಾಂತರ ಸ್ವಯಂಸೇವಕರನ್ನು ರೆಡ್‌ಕ್ರಾಸ್ ಸಂಸ್ಥೆ ಹೊಂದಿದೆ ಎಂದು ರೆಡ್‌ಕ್ರಾಸ್ ಸಭಾಧ್ಯಕ್ಷೆ ಮೀರಾ ಶಿವಲಿಂಗಯ್ಯ ತಿಳಿಸಿದರು.

ನಗರದ ಮಾಂಡವ್ಯ ಇಂಟಿಗ್ರೇಟೆಡ್ ಪಿಯು ಕಾಲೇಜಿನ ಆವರಣದಲ್ಲಿ ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಜೂನಿಯರ್ ರೆಡ್‌ಕ್ರಾಸ್ ಘಟಕ, ಮಾಂಡವ್ಯ ಇಂಟಿಗ್ರೇಟೆಡ್ ಪಿಯು ಕಾಲೇಜು ವತಿಯಿಂದ ನಡೆದ ವಿಶ್ವ ರೆಡ್ ಕ್ರಾಸ್ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಮಾನವ ನಾಗರಿಕತೆಯ ಇತಿಹಾಸದಲ್ಲಿ ವಿನಾಶ, ಯುದ್ಧ ಮತ್ತು ನೋವು ಮನುಷ್ಯನಿಗೆ ತನ್ನ ಮಿತಿಗಳನ್ನು ನೆನಪಿಸಿದ ಅನೇಕ ಕ್ಷಣಗಳಿವೆ. ಆದರೆ ಇಂತಹ ಕತ್ತಲೆಯ ಸಂದರ್ಭಗಳ ನಡುವೆಯೇ ಕರುಣೆ, ಸೇವೆ ಮತ್ತು ಸಹಬಾಳ್ವೆಯ ಜ್ಯೋತಿಯೂ ಬೆಳಗಿದೆ. ಇದು ಮಾನವಕುಲಕ್ಕೆ ಹೊಸ ದಿಕ್ಕನ್ನು ತೋರಿಸಿದೆ ಎಂದರು.

ವಿಶ್ವ ರೆಡ್ ಕ್ರಾಸ್ ದಿನ ಜ್ಯೋತಿಯ ಆಚರಣೆಯಾಗಿದೆ. ಇದು ಕೇವಲ ಸೇವೆ ಮತ್ತು ತ್ಯಾಗದ ಮೌಲ್ಯಗಳನ್ನು ಸ್ಮರಿಸುವ ದಿನವಲ್ಲ. ಬದಲಿಗೆ ಸಂಕಷ್ಟದ ಸಮಯದಲ್ಲಿ ಮನುಷ್ಯ ತನ್ನ ಸಂವೇದನಾಶೀಲತೆಯಿಂದ ಜಗತ್ತನ್ನು ಹೇಗೆ ಉತ್ತಮಗೊಳಿಸಬಹುದು ಎಂಬುದನ್ನು ತೋರಿಸುವ ದಿನವಾಗಿದೆ ಎಂದು ಹೇಳಿದರು.

ಪ್ರಸ್ತುತ ರೆಡ್‌ಕ್ರಾಸ್ ಸಂಸ್ಥೆ ರಕ್ತದಾನ ಶಿಬಿರಗಳನ್ನು ಆಯೋಜಿಸುವುದು, ಪ್ರಥಮ ಚಿಕಿತ್ಸೆ ಕುರಿತಂತೆ ತರಬೇತಿ ನೀಡುವುದು, ತಾಯಿ-ಮಗುವಿನ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವಂತಹ ಸೇವಾ ಕಾರ್ಯದಲ್ಲಿ ನಿರತವಾಗಿದೆ. ಸಂಸ್ಥೆಯ ಸದಸ್ಯರಾಗ ಬಯಸುವವರಿಗೆ ಮುಕ್ತ ಅವಕಾಶವನ್ನು ಕಲ್ಪಿಸಲಾಗಿದೆ ಎಂದರು.

ಶಾಲಾ ಹಂತದಲ್ಲಿ ಸದಸ್ಯರಾಗುವವರು ₹25 ನೀಡಿ ಸದಸ್ಯತ್ವ ಪಡೆದರೆ, ಕಾಲೇಜು ಹಂತದಲ್ಲಿ ₹1 ಸಾವಿರ ನೀಡಿ ಅಜೀವ ಸದಸ್ಯತ್ವ ಪಡೆದು ಆ ಮೂಲಕ ರೆಡ್‌ಕ್ರಾಸ್‌ನ ಸೇವಾ ಕಾರ್ಯಗಳಲ್ಲಿ ಭಾಗಿಯಾಗಬಹುದು. ಈ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಸದಸ್ಯರಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಕೆ.ಕೆ.ಚಂದ್ರಶೇಖರ್ ಅಧ್ಯಕ್ಷತೆ ವಹಿಸಿದ್ದರು. ಕಸಾಪ ಮಾಜಿ ಅಧ್ಯಕ್ಷ ಡಿ.ಪಿ.ಸ್ವಾಮಿ, ಮಾಜಿ ಕಾರ್ಯದರ್ಶಿ ಎಂ.ಬಿ.ರಮೇಶ, ಪರಿಸರ ರೂರಲ್ ಡೆವಲಪ್‌ಮೆಂಟ್ ಸೊಸೈಟಿ ಅಧ್ಯಕ್ಷ ಮಂಗಲ ಎಂ.ಯೋಗೀಶ್, ರೆಡ್‌ಕ್ರಾಸ್ ಕಾರ್ಯದರ್ಶಿ ರಂಗಸ್ವಾಮಿ ಭಾಗವಹಿಸಿದ್ದರು.



ಮಂಡ್ಯ ಮಾಂಡವ್ಯ ಇಂಟಿಗ್ರೇಟೆಡ್ ಪಿಯು ಕಾಲೇಜಿನ ಆವರಣದಲ್ಲಿ ನಡೆದ ವಿಶ್ವ ರೆಡ್‌ಕ್ರಾಸ್ ದಿನಾಚರಣೆಯನ್ನು ರೆಡ್‌ಕ್ರಾಸ್ ಸಭಾಧ್ಯಕ್ಷೆ ಮೀರಾ ಶಿವಲಿಂಗಯ್ಯ ಉದ್ಘಾಟಿಸಿದರು.

ಶಾಹಿ ಗಾರ್ಮೆಂಟ್ಸ್‌ನಲ್ಲಿ ಕಾರ್ಮಿಕ ದಿನ

• **ಕನ್ನಡಪ್ರಭ ವಾರ್ತೆ** ಮದ್ದೂರು

ಕೈಗಾರಿಗಳ ಅಭಿವೃದ್ಧಿ ಕಾರ್ಮಿಕರ ಶ್ರಮದಿಂದ ಮಾತ್ರ ಸಾಧ್ಯ ಎಂದು ಜೆಎಂಎಫ್‌ಸಿ ನ್ಯಾಯಾಲಯದ ಎರಡನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶ ಕೆ.ಗೋಪಾಲಕೃಷ್ಣ ಹೇಳಿದರು.

ತಾಲೂಕಿನ ಗೆಜ್ಜಲಗೆರೆ ಕೈಗಾರಿಕಾ ಪ್ರದೇಶದ ಶಾಹಿ ಗಾರ್ಮೆಂಟ್ಸ್ ನಲ್ಲಿ ತಾಲೂಕು ಕಾನೂನು ಸೇವಾ ಸಮಿತಿ ಹಾಗೂ ವಕೀಲರ ಸಂಘದ ಸಹಯೋಗದಲ್ಲಿ ನಡೆದ ಕಾರ್ಮಿಕ ದಿನಾಚರಣೆಯಲ್ಲಿ ಮಾತನಾಡಿ, ರೈತರು ದೇಶದ ಬೆನ್ನೆಲುಬಾದರೆ, ಕಾರ್ಮಿಕರು ಸಹ ಕೈಗಾರಿಕೆಗಳ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ. ಕಾರ್ಮಿಕ ದುಡಿದರೆ ದೇಶ ಪ್ರಗತಿಯತ್ತ ಮುನ್ನಡೆಯುತ್ತದೆ ಎಂದರು. ಕಾರ್ಖಾನೆಗಳ ಮಾಲೀಕರು ಕಾರ್ಮಿಕರಿಗೆ ಕನಿಷ್ಠ ವೇತನ ನಿಗದಿ ಮಾಡುವ ಜೊತೆಗೆ ಅವರುಗಳಿಗೆ ಸರ್ಕಾರದ ನೀತಿಯ ಅನುಗುಣವಾಗಿ ಅಗತ್ಯ ಸೌಲಭ್ಯ ಒದಗಿಸುವುದು ಮಾಲೀಕರ ಕರ್ತವ್ಯವಾಗಿದೆ. ಹೀಗಾಗಿ ಕಾರ್ಖಾನೆಗಳು ಆರ್ಥಿಕವಾಗಿ ಸದೃಢಗೊಳ್ಳಲು ಮೊದಲು ಕಾರ್ಮಿಕರ ಹಿತರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮ ಉದ್ಘಾಟಿಸಿದ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ.ಎಸ್.ಹರಿಣಿ ಮಾತನಾಡಿ, ಕಾರ್ಮಿಕರ ಕಲ್ಯಾಣ ಮತ್ತು ಸಾಮಾಜಿಕ ಭದ್ರತೆಗೆ ಸರ್ಕಾರ ಪ್ರಥಮ ಆದ್ಯತೆ ನೀಡುತ್ತಿದೆ. ಅವರ ಕಲ್ಯಾಣ ಕಾರ್ಯಕ್ರಮಗಳಿಗೆ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ ಎಂದರು.

ಕೈಗಾರಿಕೆಗಳಲ್ಲಿ ದುಡಿಯುವ ಮಹಿಳೆಯರು ತಮ್ಮ ಯಾವುದೇ ವೈಯಕ್ತಿಕ ಸಮಸ್ಯೆಗಳಿಗೆ ಉಚಿತ ಕಾನೂನು ಸೇವಾ ಸಮಿತಿ ನೆರವು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಸಮಸ್ಯೆ ಪರಿಹಾರಕ್ಕೆ ಉಚಿತವಾಗಿ ವಕೀಲರ ಸೌಲಭ್ಯ ಪಡೆದುಕೊಳ್ಳಲು ಅವಕಾಶ ನೀಡಲಾಗಿದೆ ಎಂದು ತಿಳಿಸಿದರು.

ಶಾಹಿ ಗಾರ್ಮೆಂಟ್ಸ್‌ನ ಮಾನವ ಸಂಪನ್ಮೂಲ ವಿಭಾಗದ ಹಿರಿಯ ಪ್ರಧಾನ ವ್ಯವಸ್ಥಾಪಕ ರಮೇಶ್ ಬಂಡಿ ಮಾತನಾಡಿ, ಗಾರ್ಮೆಂಟ್ಸ್ ನಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಯಾವುದೇ ಸಮಸ್ಯೆ ಆಗದಂತೆ ಸೌಲಭ್ಯ ನೀಡಲಾಗುತ್ತಿದೆ. ಆಡಳಿತ ಮಂಡಳಿ ಕಾರ್ಮಿಕರ ಹಿತ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದರು.

ಉಚಿತ ಕಾನೂನು ಸಲಹೆಗಾರ ಎಸ್.ಜಯರಾಮ ಕಾರ್ಮಿಕ ಕಾನೂನುಗಳ ಕುರಿತು ಸಂಪನ್ಮೂಲ ಭಾಷಣ ಮಾಡಿದರು. ಕಾರ್ಮಿಕ ನಿರೀಕ್ಷಕಿ ನಾಗರತ್ನ, ವಕೀಲರ ಸಂಘದ ಅಧ್ಯಕ್ಷ ಎಂ.ಎನ್.ಶಿವಣ್ಣ, ಕಾರ್ಯದರ್ಶಿ ಎಂ.ಜೆ.ಸುಮಂತ್ ಹಾಗೂ ಕಾರ್ಖಾನೆಯ ವಿವಿಧ ವಿಭಾಗಗಳ ವ್ಯವಸ್ಥಾಪಕರು ಪಾಲ್ಗೊಂಡಿದ್ದರು.

